ಸಂಪುಟ : 10 ಸಂಚಿಕೆ: 195 ಪುಟ : 4+2 ಬೆಲೆ: 3.00 ಗುರುವಾರ ಸೆಪ್ಟೆಂಬರ್ 11 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 195 Pages : 4+2 Price : 3.00 Thursday September 11 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಇಂಧನ ಇಲಾಖೆ ಅಧಿಕಾರಿಗಳು, ಜನಪ್ರತಿನಿಧಿಗಳೊಂದಿಗಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಕೆ.ಜೆ ಜಾರ್ಜ್

## ರೈತರಿಗೆ ಹಗಲು ಹೊತ್ತಿನಲ್ಲೇ ಏಳು ಗಂಟೆ ವಿದ್ಯುತ್

**■ವಿಜಯಸಾಕ್ಷಿ ಸುದ್ದಿ, ಗದಗ**

ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ಹೊತ್ತಿನಲ್ಲಿಯೇ ನಿರಂತರ ಏಳು ಗಂಟೆಗಳ ಕಾಲ ವಿದ್ಯುತ್ ನೀಡುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಕುಸುಮ್-ಬಿ ಹಾಗೂ ಕುಸುಮ್-ಸಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳೊಂದಿಗಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯುತ್ ಮಾರ್ಗ ಜಾಲದಿಂದ 500 ಮೀ ವ್ಯಾಪ್ತಿಯ ಹೊರಗಿರುವ ಪಂಪ್‌ಸೆಟ್‌ಗಳಿಗೆ ಕುಸುಮ್-ಬಿ ಯೋಜನೆಯಡಿ ಸೋಲಾರ್ ವಿದ್ಯುತ್ ಕಲ್ಪಿಸಲಾಗುವುದು. ಈ ಯೋಜನೆಗೆ ನಮ್ಮ ಸರ್ಕಾರದಿಂದ ನೀಡಲಾಗುವ ಸಬ್ಸಿಡಿಯನ್ನು ಶೇ.30ರಿಂದ ಶೇ. 5ಕ್ಕೆ ಹೆಚ್ಚಳ ಮಾಡಿದೆ. ಕುಸುಮ್-ಸಿ ಯೋಜನೆಯಡಿ ಕೃಷಿ ಫೀಡರ್‌ಗಳ ಸೌರೀಕರಣ ಕಾರ್ಯ ನಡೆಯುತ್ತಿದ್ದು, ಇದರಿಂದಾಗಿ ಹಗಲು ವೇಳೆ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ 7 ಗಂಟೆ ವಿದ್ಯುತ್ ಪೂರೈಸಲು ಸಾಧ್ಯವಾಗುತ್ತದೆ ಎಂದರು.

2023ರಲ್ಲಿ ರಾಜ್ಯದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ 4.5 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳು ಇದ್ದವು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ 2.5 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಿ ಮೂಲ ಸೌರ್ಯ ಒದಗಿಸಲಾಗಿದೆ. ಇನ್ನೊಂದು ವರ್ಷದಲ್ಲಿ ಉಳಿದ ಪಂಪ್‌ಸೆಟ್‌ಗಳನ್ನೂ ಸಕ್ರಮಗೊಳಿಸುವ ಕಾರ್ಯ ಪೂರ್ಣಗೊಳ್ಳಲಿವೆ. ಇದರೊಂದಿಗೆ ತ್ವರಿತವಾಗಿ ವಿದ್ಯುತ್ ಸಂಪರ್ಕ ಪಡೆಯಲು ಬಯಸಿದ ರೈತರಿಗಾಗಿ ನವೀಕೃತ ಶೀಘ್ರ ಸಂಪರ್ಕ ಯೋಜನೆ ಜಾರಿಗೆ ತಂದಿದ್ದೇವೆ. ರೈತರು ಸ್ವಂತ ಖರ್ಚಿನಲ್ಲಿ ವಿದ್ಯುತ್ ಜಾಲ ಸೇರಿದಂತೆ ಮೂಲ ಸೌಕರ್ಯ ಕಲ್ಪಿಸಿಕೊಂಡರೆ ಎಸ್ಕಾಂಗಳಿಂದ ಟ್ರಾನ್ಸ್ ಫಾರ್ಮರ್‌ಗಳನ್ನು ನೀಡಲಾಗುತ್ತಿದೆ ಎಂದು ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು.




ಸಮರ್ಪಕ ವಿದ್ಯುತ್ ಪೂರೈಕೆಗಾಗಿ ರಾಜ್ಯದಲ್ಲಿ ಮೂಲ ಸೌಕರ್ಯ ಹೆಚ್ಚಿಸಲಾಗುತ್ತಿದ್ದು, ಕೆಪಿಟಿಸಿಎಲ್ ವತಿಯಿಂದ ಹೊಸದಾಗಿ 100 ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಪವನ ಹಾಗೂ ಸೌರ ವಿದ್ಯುತ್‌ನ್ನು ಬ್ಯಾಟರಿ ಮೂಲಕ ಸಂಗ್ರಹ ಮಾಡುವ ಕೆಲಸವನ್ನು ಮಾಡಲಾಗುತ್ತಿದೆ. ರೈತರ ಪಂಪ್‌ಸೆಟ್‌ಗಳಿಗೆ ಸುಲಭ ಮತ್ತು ಸಮರ್ಪಕ ವಿದ್ಯುತ್ ಸರಬರಾಜು ಮಾಡುವ ದೃಷ್ಟಿಯಿಂದ ಬೇಡಿಕೆ ಇರುವಷ್ಟು ಟ್ರಾನ್ಸ್‌ಫಾರ್ಮರ್‌ಗಳನ್ನು ಪೂರೈಸಲಾಗುವುದು. ರೈತರಿಗೆ ಹೊರೆಯಾಗದಂತೆ ಇಲಾಖೆಯ ವಾಹನದಲ್ಲಿಯೇ ಟ್ರಾನ್ಸ್‌ಫಾರ್ಮರ್ ಸಾಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಇಂಧನ ಇಲಾಖೆಯ 3 ಸಾವಿರ ಲೈನ್‌ಮೆನ್‌ಗಳ ನೇಮಕಾತಿ ಪ್ರಕ್ರಿಯೆ ಇನ್ನೊಂದು ತಿಂಗಳಿನಲ್ಲಿ ಪೂರ್ಣಗೊಳ್ಳಲಿದೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ ಗೃಹ ಜ್ಯೋತಿ ರಾಜ್ಯದಲ್ಲಿ ಶೇ. 99ರಷ್ಟು ಸಾಧನೆಯಾಗಿದೆ. ಗದಗ ಜಿಲ್ಲೆಯಲ್ಲಿ ಒಟ್ಟು ಶೇ. 98.49ರಷ್ಟು ಸಾಧನೆ ಮಾಡಲಾಗಿದೆ ಎಂದು ತಿಳಿಸಿದರು.

ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ರಾತ್ರಿ ಹೊತ್ತಿನಲ್ಲಿ ತೋಟದ ಮನೆಗಳಿಗೆ ನಿರಂತರ ಸಿಂಗಲ್ ಫೇಸ್ ವಿದ್ಯುತ್ ನೀಡಬೇಕು. 24 ಗಂಟೆಯೊಳಗೆ ರೈತರಿಗೆ ಟ್ರಾನ್ಸ್‌ಫಾರ್ಮರ್ ಸಿಗುವಂತಾಗಬೇಕು ಎಂದರು.

ಹೆಸ್ಕಾಂ ಅಧ್ಯಕ್ಷ ಸೈಯದ್ ಅಜೀಮ್ ಫೀರ್ ಎಸ್.ಖಾದ್ರಿ, ಕೆ.ಪಿ.ಟಿ.ಸಿ.ಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ ಪಾಂಡೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಸೇರಿದಂತೆ ಹೆಸ್ಕಾಂ, ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳು ಇದ್ದರು.

ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ ಎಂ.ಎಲ್ ಅತಿಥಿಗಳನ್ನು ಸ್ವಾಗತಿಸಿ, ಸಭೆ ನಿರ್ವಹಿಸಿದರು.

> ನಮ್ಮ ಸರ್ಕಾರದ ಅಧಿಕಾರಾವಧಿಯಲ್ಲಿ ಕೇವಲ ಒಂದು ತಿಂಗಳು ಮಾತ್ರ ವಿದ್ಯುತ್ ಕೊರತೆ ಉಂಟಾಗಿತ್ತು. ಉತ್ತರ ಪ್ರದೇಶ ಹಾಗೂ ಪಂಜಾಬ್ ರಾಜ್ಯಗಳಿಂದ ವಿನಿಮಯ ಆಧಾರದ ಮೇಲೆ ವಿದ್ಯುತ್ ಪಡೆದು ಸಮಸ್ಯೆ ಬಗೆಹರಿಸಲಾಗಿತ್ತು. ಸದ್ಯ ನಮ್ಮಲ್ಲಿ ವಿದ್ಯುತ್ ಕೊರತೆಯಿಲ್ಲ. ರೈತರಿಗೆ ನಿರಂತರವಾಗಿ ವಿದ್ಯುತ್ ಕಲ್ಪಿಸುವ ಉದ್ದೇಶದಿಂದ ಹೆಚ್ಚು ವಿದ್ಯುತ್ ಉತ್ಪಾದನೆಗೆ ಆದ್ಯತೆ ನೀಡಲಾಗುತ್ತಿದೆ.
>
> **– ಕೆ.ಜೆ. ಜಾರ್ಜ್.**
> ಇಂಧನ ಸಚಿವರು.

> ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಮಾತನಾಡಿ, ಗದಗ ಜಿಲ್ಲೆಯಲ್ಲಿ ಪವನ ಹಾಗೂ ಸೌರ ವಿದ್ಯುತ್ ಉತ್ಪಾದನೆಗೆ ಹೆಚ್ಚಿನ ಅವಕಾಶ ಇದೆ. ಇದರ ಲಾಭ ಇಲ್ಲಿನ ರೈತರಿಗೆ ಸಿಗುವಂತಾಗಬೇಕು. ಈ ಯೋಜನೆಗಳಿಗೆ ಜಮೀನು ನೀಡುವ ರೈತರಿಗೆ ಯೋಜನೆಯಲ್ಲಿ ಶೇ. 10ರಷ್ಟು ಪಾಲುದಾರಿಕೆ ನೀಡಬೇಕು. ವಿದ್ಯುತ್ ಉತ್ಪಾದಿಸುವ ಉತ್ತರ ಕನ್ನಡ ಜಿಲ್ಲೆಗೆ ಈ ಹಿಂದೆ ಕೆಲವು ರಿಯಾಯತಿ ನೀಡಲಾಗುತ್ತಿತ್ತು. ಅದೇ ರೀತಿ ಗದಗ ಜಿಲ್ಲೆಗೂ ರಿಯಾಯತಿ ಸಿಗಬೇಕು ಎಂದರು.

### ಗದಗದಲ್ಲಿ ಅಕ್ರಮ ಅಕ್ಕಿ ಮಾರಾಟ ದಂಧೆ!

## ರೈತರು ರಾಶಿ ಮಾಡುವ ರೀತಿ ಬಚ್ಚಿಟ್ಟ ಅಕ್ಕಿ ಜಪ್ತಿ!

**■ವಿಜಯಸಾಕ್ಷಿ ಸುದ್ದಿ, ಗದಗ**

ಹಸಿದವರ ಹೊಟ್ಟೆ ತುಂಬಿಸಲು ಜಾರಿಗೆ ತಂದಿರುವ ಅನ್ನಭಾಗ್ಯ ಯೋಜನೆಯ ಅಕ್ಕಿ ಲೂಟಿಕೋರರ ಪಾಲಾಗುತ್ತಿದೆ.

ಎಸ್, ಗದಗ ಜಿಲ್ಲೆಯಲ್ಲಿ ಅಕ್ರಮ ಅಕ್ಕಿ ದಂಧೆ ಎಗ್ಗಿಲ್ಲದೆ ನಡೆಯುತ್ತಿದೆ. ಆಹಾರ ಇಲಾಖೆ ಹಾಗೂ ಪೊಲೀಸರಿಗೆ ಚಳ್ಳೆಹಣ್ಣು ತಿನ್ನುಸುತ್ತಿದ್ದ ಖದೀಮರ ಬಣ್ಣ ಬಯಲು ಮಾಡಲಾಗಿದೆ. ಗದಗನ ಬೆಟಗೇರಿಯ ವಸಂತ ಸಿಂಗ್ ಜಮಾದಾರ ಬಡಾವಣೆಯಲ್ಲಿ ಸಂಗ್ರಹಿಸಿದ್ದ ಪಡಿತರ ಅಕ್ಕಿಯನ್ನು ವಶಕ್ಕೆ ಪಡೆಯಲಾಗಿದೆ. ಖಾಲಿ ಜಾಗದಲ್ಲಿ ರೈತರು ರಾಶಿ ಮಾಡ್ತಾಯಿರೋ ಜಾಗದಲ್ಲಿ, ಅಕ್ಕಿ ದಂಧೆಕೋರರು ಅಕ್ಕಿಯನ್ನು ಸಂಗ್ರಹಣೆ ಮಾಡಿದ್ರು. ಪೊಲೀಸ್ ಇಲಾಖೆ ಹಾಗೂ ಆಹಾರ ಇಲಾಖೆಯ ಅಧಿಕಾರಿಗಳಿಗೆ ಅನುಮಾನ ಬಾರದೆ ಇರಲಿ ಎಂದು ರಾಶಿ ಮಾಡುವ ಹಾಗೇ ನಾಟಕ ಮಾಡ್ತಾಯಿದ್ರು.. ಆದ್ರೆ, ಪೊಲೀಸರು ದಂಧೆಕೋರರ ನಾಟಕವನ್ನು ಬಯಲು ಮಾಡಿದ್ದಾರೆ. 30 ಪಡಿತರ ಚೀಲವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಈ ಅಕ್ರಮ ಅಕ್ಕಿ ದಂಧೆ ಮಾಡ್ತಾಯಿದ್ದ ಶ್ರೀಕಾಂತ್ ಭಜಂತ್ರಿ ಎನ್ನುವಾತನನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಬೆಟಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಪೊಲೀಸರು ಹೆಚ್ಚಿನ ತನಿಖೆಯನ್ನು ನಡೆಸುತ್ತಿದ್ದಾರೆ.

**ಎಸ್ಪಿ ರೋಹನ್ ನ್ ಜಗದೀಶ್ ಹೇಳಿದ್ದೇನು?:** ಜಿಲ್ಲೆಯ ಲಕ್ಷ್ಮೇಶ್ವರ, ನರಗುಂದ, ರೋಣ, ಗಜೇಂದ್ರಗಡ, ಶಿರಹಟ್ಟಿ, ಸೇರಿದಂತೆ ಮುಂಡರಗಿ ತಾಲೂಕಿನಲ್ಲಿ ಅಕ್ರಮ ದಂಧೆ ನಡೆಯುತ್ತಿದೆ ಎನ್ನುವ ಅನುಮಾನವಿದೆ. ಇನ್ನೂ ಮುಂಡರಗಿ ತಾಲೂಕಿನ ಕದಾಂಪೂರ ಗ್ರಾಮದ ನಿವಾಸಿಯಾದ ನಿಲ್ಲವ್ವ ಸಂಕಣ್ಣವರ 29 ಚೀಲ್, ▶▶3ನೇ ಪುಟಕ್ಕೆ

### ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಕಾನೂನು ಸಚಿವ ಎಚ್.ಕೆ. ಪಾಟೀಲ

## ಅಕ್ರಮ ಗಣಿಗಾರಿಕೆ ನಷ್ಟ ವಸೂಲಾತಿಗೆ ಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅಪರಾಧದಿಂದ ಉತ್ಪತ್ತಿಯಾದ ಸ್ವತ್ತನ್ನು ವಶಪಡಿಸಿಕೊಳ್ಳುವುದಕ್ಕಾಗಿ ಮತ್ತು ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕ ಮಸೂದೆಗೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ ತಿಳಿಸಿದರು.

ಬುಧವಾರ ಗದುಗಿನ ಕಾಟನ್ ಸೇಲ್ ಸೊಸೈಟಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ರಾಜ್ಯಪಾಲರು ಈ ಮಸೂದೆಗೆ ಸೆ. 9ರಂದು ಅಂಕಿತ ಹಾಕಿದ್ದಾರೆ. ರಾಜ್ಯ ಸರ್ಕಾರವು ಗೆಜೆಟ್ ಅಧಿಸೂಚನೆಯನ್ನು ಪ್ರಕಟಿಸಿದ್ದು, ಮುಂದಿನ ಕ್ರಮಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆಗಾಗಿ ಕಾಯಲಾಗುತ್ತಿದೆ. ಈ ಕಠಿಣ ಕ್ರಮದ ಮೂಲಕ, ಅಕ್ರಮ ಗಣಿಗಾರಿಕೆಯ ಸ್ವತ್ತನ್ನು ವಶಪಡಿಸಿಕೊಳ್ಳಲು ಮತ್ತು ವಸೂಲಾತಿಗಾಗಿ ಪ್ರತ್ಯೇಕ ಅಧಿಕಾರಿ (ಆಯುಕ್ತರು) ನೇಮಕ ಮಾಡಲು ಕಾನೂನಿನ ಅವಕಾಶ ದೊರೆತಿದೆ ಎಂದರು.




ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಜುಲೈ 2ರಂದು ನಡೆದ ಸಂಪುಟ ಸಭೆಯಲ್ಲಿ ಗಣಿ ಹಗರಣದ ಬಗ್ಗೆ ಸುದೀರ್ಘ ಚರ್ಚೆ ನಡೆಸಲಾಯಿತು. ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ಧರಿಸಲು ಸಂಪುಟ ಉಪಸಮಿತಿಯನ್ನು ರಚಿಸಲಾಯಿತು. ಉಪಸಮಿತಿಯು ಆಗಸ್ಟ್ 12ರಂದು ತನ್ನ ವರದಿಯನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಿತು ಎಂದರು.

ಆ ವರದಿಯಲ್ಲಿ, ವಸೂಲಾತಿ ಆಯುಕ್ತರನ್ನು ನೇಮಕ ಮಾಡುವ ಬಗ್ಗೆ ಕರಡು ಮಸೂದೆಯನ್ನು ಸಿದ್ಧಪಡಿಸಿ ಸಲ್ಲಿಸಲಾಗಿತ್ತು. ಆಗಸ್ಟ್ 14ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ವರದಿಯನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು. ಆಗಸ್ಟ್ 21ರಂದು ವಿಧಾನಸಭೆಯಲ್ಲಿ ಮತ್ತು 22ರಂದು ವಿಧಾನ ಪರಿಷತ್ತಿನಲ್ಲಿ ಈ ಮಸೂದೆ ಪಾಸ್ ಆಯಿತು. ಬಳಿಕ ಅದನ್ನು ರಾಜ್ಯಪಾಲರ ಅಂಕಿತಕ್ಕಾಗಿ ಕಳುಹಿಸಲಾಗಿತ್ತು ಎಂದು ತಿಳಿಸಿದರು.

ಈ ಅಧಿನಿಯಮದ ಮೂಲಕ, ಕನ್ನಡ ನಾಡಿನ ಆಸ್ತಿಯನ್ನು ಮರಳಿ ತರಲು ▶▶3ನೇ ಪುಟಕ್ಕೆ

> ಈ ಅಧಿನಿಯಮವು ಕೇವಲ ಬಳ್ಳಾರಿಗಷ್ಟೇ ಸೀಮಿತವಾಗಿಲ್ಲ. ರಾಜ್ಯದ ಎಲ್ಲಾ ಅಕ್ರಮ ಗಣಿಗಾರಿಕೆ ಪ್ರಕರಣಗಳೂ ಇದರ ವ್ಯಾಪ್ತಿಗೆ ಬರಲಿವೆ. ಲೋಕಾಯುಕ್ತರು ಸುಮಾರು 12 ಸಾವಿರ ಕೋಟಿ ರೂ.ಗಳ ಅಕ್ರಮ ನಡೆದಿದೆ ಎಂದು ಅಂದಾಜಿಸಿದ್ದಾರೆ.
>
> ನಮ್ಮ ಉಪಸಮಿತಿಯು 2013ರಿಂದ 2018ರವರೆಗಿನ ಅಕ್ರಮಗಳನ್ನು ಪರಿಶೀಲಿಸಿ, 1 ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ನಷ್ಟ ಅಂದಾಜಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದಿನ ಮಾರುಕಟ್ಟೆ ಬೆಲೆ ಪರಿಗಣಿಸಿದರೆ 78 ಸಾವಿರ ಕೋಟಿ ರೂ. ಅಂದಾಜಿಸಿದ್ದಾರೆ. ಹೀಗಾಗಿ ಮುಂದಿನ ದಿನಗಳಲ್ಲಿ ನಷ್ಟದ ಪ್ರಮಾಣ ಸ್ಪಷ್ಟವಾಗಲಿದೆ.
>
> **– ಎಚ್.ಕೆ. ಪಾಟೀಲ.**
> ಸಚಿವರು.

## ನೂತನ ಕಟ್ಟಡದ ಅಡಿಗಲ್ಲು ಸಮಾರಂಭ



**■ವಿಜಯಸಾಕ್ಷಿ ಸುದ್ದಿ, ಗದಗ**

ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದಿಂದ ಗದಗ ನಗರದ ಹುಬ್ಬಳ್ಳಿ ರಸ್ತೆಯಲ್ಲಿರುವ ಕೆಪಿಟಿಸಿಎಲ್ 220 ಕೆ.ವಿ ಸ್ಟೇಷನ್ ಆವರಣದಲ್ಲಿ ಗದಗ ಜಿಲ್ಲಾ ಕಾರ್ಯ ಮತ್ತು ಪಾಲನಾ ವೃತ್ತ ಕಛೇರಿಯ ನೂತನ ಕಟ್ಟಡದ ಅಡಿಗಲ್ಲು ಸಮಾರಂಭವನ್ನು ಬುಧವಾರ ಇಂಧನ ಸಚಿವ ಕೆ.ಜೆ. ಜಾರ್ಜ್ ನೆರವೇರಿಸಿದರು.

ಈ ಸಂದರ್ಭದಲ್ಲಿ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ ಅಜ್ಜಂಪೀರ್ ಎಸ್. ಖಾದ್ರಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಮಟ್ಟದ ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ಕ.ವಿ.ಪ್ರ.ನಿ.ನಿ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಹುಬ್ಬಳ್ಳಿ ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಹುಬ್ಬಳ್ಳಿ ಹೆಸ್ಕಾಂ ನಿರ್ದೇಶಕ (ತಾಂತ್ರಿಕ) ಎಸ್. ಜಗದೀಶ್, ಹುಬ್ಬಳ್ಳಿ ಹೆಸ್ಕಾಂ ನಿರ್ದೇಶಕ (ಹಣಕಾಸು) ಪ್ರಕಾಶ ಪಾಟೀಲ ಸೇರಿದಂತೆ ಗಣ್ಯರು, ಹಿರಿಯರು, ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು ಹಾಜರಿದ್ದರು.

### ಸೇವಾ ಪಾಕ್ಷಿಕ ಅಭಿಯಾನ ಉದ್ಘಾಟಿಸಿದ ಲಿಂಗರಾಜ ಪಾಟೀಲ

## ಸೇವೆಯೇ ಬಿಜೆಪಿಯ ಧರ್ಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ತತ್ವ-ಸಿದ್ಧಾಂತದ ಪಕ್ಷ. ಇದಕ್ಕೆ ಕೇವಲ ರಾಜಕೀಯ ಅಧಿಕಾರವೇ ಮುಖ್ಯವಲ್ಲ, ದೀನ-ದಲಿತರ ಸೌಲಭ್ಯ ವಂಚಿತ ಜನರ ಸೇವೆಯೇ ಬಿಜೆಪಿಯ ಧರ್ಮ ಎಂದು ಬಿಜೆಪಿ ರಾಜ್ಯ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ ಪಾಟೀಲ ಹೇಳಿದರು.

ಅವರು ನಗರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ನಡೆದ ಸೇವಾ ಪಾಕ್ಷಿಕ ಜಿಲ್ಲಾ ಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಸಂಘಟನೆ, ಸೇವೆ, ಅಭಿವೃದ್ಧಿ ಬಿಜೆಪಿಯ ಮೂಲಮಂತ್ರ. ಆ ಕಾರಣದಿಂದಾಗಿ ಪ್ರಧಾನಿ ನರೇಂದ್ರ ಮೋದಿಯವರ ಜನ್ಮ ದಿನವಾದ ಸೆ. 17ರಿಂದ ಮಹಾತ್ಮ ಗಾಂಧಿ ಜನ್ಮದಿನವಾದ ಅಕ್ಟೋಬರ್ 2ರವರೆಗೆ ದೇಶಾದ್ಯಂತ ಸಾಮಾಜಿಕ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ದೇಶದ ಸರ್ವಾಂಗೀಣ ಅಭಿವೃದ್ಧಿಗಾಗಿ ಶ್ರಮಿಸಿದ ಈ ಮಹಾನ್ ನಾಯಕರ ಜನ್ಮದಿನವನ್ನು ಸಾರ್ಥಕಗೊಳಿಸುವ ನಿಟ್ಟಿನಲ್ಲಿ ಬಿಜೆಪಿಯ ಪ್ರತಿ ಕಾರ್ಯಕರ್ತನು ಸಮರ್ಪಣಾಭಾವದಿಂದ ಸೇವಾ ಕಾರ್ಯಗಳನ್ನ ಕೈಗೊಳ್ಳುವಂತೆ ಕರೆ ನೀಡಿದರು. ಅಭಿಯಾನದ ಜಿಲ್ಲಾ ಸಂಚಾಲಕ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ಜಿಲ್ಲೆಯ ಪ್ರತಿ ತಾಲೂಕು, ಹೋಬಳಿ, ಪಟ್ಟಣ ಹಾಗೂ ಗ್ರಾಮ ಮಟ್ಟದ ಎಲ್ಲ ಹಂತಗಳಲ್ಲಿ ಎಲ್ಲ ಸೇವಾ ಕಾರ್ಯಗಳನ್ನ ಕೈಗೊಳ್ಳಲು ಮಂಡಲ ಸೇವಾ ತಂಡಗಳನ್ನ ರಚಿಸಲಾಗಿದ್ದು, ಪ್ರತಿ ಕಾರ್ಯಕರ್ತನೂ ಸೇವೆ ಸಲ್ಲಿಸುವ ಮುಖಾಂತರ ಸಮಾಜದ ಹಾಗೂ ನಾಡಿನ ಋಣವನ್ನ ತೀರಿಸಲು ಶ್ರಮಿಸಬೇಕು ಎಂದು ಹೇಳಿದರು. ಬಿಜೆಪಿ ಮುಖಂಡರಾದ ಉಮೇಶಗೌಡ ಪಾಟೀಲ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರೀಗೌಡ್ರ ಮಾತನಾಡಿದರು. ವೇದಿಕೆಯಲ್ಲಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಕ್ಕಿರೇಶ ರಟ್ಟಿಹಳ್ಳಿ ಉಪಸ್ಥಿತರಿದ್ದರು. ಬಿಜೆಪಿ 9 ಮಂಡಲಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಎಸ್.ಟಿ. ಮೋರ್ಚಾ ಅಧ್ಯಕ್ಷ ಈಶ್ವರಪ್ಪ ರಂಗಪ್ಪನವರ, ಒಬಿಸಿ ಮೋರ್ಚಾ ಅಧ್ಯಕ್ಷ ಸಿದ್ದೇಶ ಹೂಗಾರ, ಮಂಡಲ ಅಧ್ಯಕ್ಷ ನಾಗನಗೌಡ ತಿಮ್ಮನಗೌಡ್ರ, ಉಮೇಶ ಮಲ್ಲಾಪೂರ, ಅಂದಪ್ಪ ಹಾರೂಗೇರಿ, ಸೋಮಶೇಖರ ಚರೇದ, ಬೂದಪ್ಪ ಹಳ್ಳಿ, ಸುರೇಶ ಮರಳಪ್ಪನವರ, ಜಿಲ್ಲಾ ಪ್ರಕೋಷ್ಠ ಸಂಯೋಜಕ ಶಶಿಧರ ದಿಂಡೂರ, ಸಹ ಸಂಯೋಜಕ ರಮೇಶ ಸಜ್ಜಗಾರ, ಸೇವಾ ಪಾಕ್ಷಿಕ ಅಭಿಯಾನ ಜಿಲ್ಲಾ ತಂಡದ ಸದಸ್ಯರಾದ ರಾಮಪ್ಪ ವಕ್ಕರ, ಕೆ.ಪಿ. ಕೋಟಿಗೌಡ್ರ, ಸೇವಾ ಪಾಕ್ಷಿಕ ಜಿಲ್ಲಾ ಹಾಗೂ ಮಂಡಲ ತಂಡಗಳ ಪ್ರತಿನಿಧಿಗಳು, ಕಾರ್ಯಕರ್ತರು ಭಾಗವಹಿಸಿದ್ದರು.




> ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ಜಿಲ್ಲೆಯ 9 ಮಂಡಲ ವ್ಯಾಪ್ತಿಯಲ್ಲಿ ಆರೋಗ್ಯ ಶಿಬಿರ, ರಕ್ತದಾನ ಶಿಬಿರ, ವೋಕಲ್ ಫಾರ್ ಲೋಕಲ್ ಮೇಳ, ಸ್ವಚ್ಛತಾ ಅಭಿಯಾನ, ಸಸಿ ನೆಡುವುದು, ದಿವ್ಯಾಂಗರಿಗೆ ಹಾಗೂ ವಿಶೇಷ ಸಾಧನಾ ವ್ಯಕ್ತಿಗಳಿಗೆ ಸನ್ಮಾನ, ಚಿತ್ರಕಲಾ ಸ್ಪರ್ಧೆ, ನಮೋ ಮ್ಯಾರಾಥಾನ್, ವಿಚಾರ ಸಂಕೀರ್ಣ, ಕ್ರೀಡಾಕೂಟಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

## ನೇಪಾಳ ಧಗ-ಧಗ: ಕನ್ನಡಿಗರು ಸುರಕ್ಷಿತವಾಗಿದ್ದಾರೆ ಎಂದ ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರು ಸಾಮಾಜಿಕ ಜಾಲತಾಣದ ಮೂಲಕ ನೇಪಾಳದಲ್ಲಿ ಸಿಲುಕಿರುವ ಕನ್ನಡಿಗರು ಸುರಕ್ಷಿತವಾಗಿ ಇದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಎಕ್ಸ್‌ನಲ್ಲಿ ಪೋಸ್ಟ್ ಮಾಡುವ ಮೂಲಕ ಸಿಎಂ ಮಾಹಿತಿ ನೀಡಿದ್ದು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ದೆಹಲಿಯ ಕರ್ನಾಟಕ ಭವನದ ನಿವಾಸಿ ಆಯುಕ್ತರು ವಿವಿಧ ತಂಡಗಳಲ್ಲಿ ಇರುವ ಕನ್ನಡಿಗರ ಸಂಪರ್ಕದಲ್ಲಿದ್ದಾರೆ ಎಂದು ಅಧಿಕೃತವಾಗಿ ಹೇಳಿದ್ದಾರೆ.

ಇನ್ನೂ ರಾಜ್ಯ ಸರ್ಕಾರದ ಅಧಿಕಾರಿಗಳು ವಿದೇಶಾಂಗ ಇಲಾಖೆಯ ಅಧಿಕಾರಿಗಳ ಜೊತೆ ಮಾತುಕತೆ ನಡೆಸಿದ್ದು, ಮುಖ್ಯಮಂತ್ರಿಗಳ ಸೂಚನೆ ಮೇರೆಗೆ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಕ್ರಮ ಕೈಗೊಳ್ಳಲಾಗುತ್ತಿದೆ. ಇನ್ನು ಮುಖ್ಯಮಂತ್ರಿಗಳ ಸೂಚನೆ ಬಳಿಕ ಮುಖ್ಯಕಾರ್ಯದರ್ಶಿ ನಿರಂತರವಾಗಿ ವಿದೇಶಾಂಗ ಇಲಾಖೆ ಅಧಿಕಾರಿಗಳ ಜೊತೆ ಸಂಪರ್ಕದಲ್ಲಿದ್ದಾರೆ ಎನ್ನಲಾಗಿದೆ.

ನೇಪಾಳ ಧಗ ಧಗ!

ನೇಪಾಳದಲ್ಲಿ ಪ್ರತಿಭಟನೆ ತೀವ್ರಗೊಂಡಿದೆ. ಸಾಮಾಜಿಕ ಜಾಲತಾಣ ಬ್ಯಾನ್ ಮತ್ತು ಭ್ರಷ್ಟಾಚಾರದ ವಿರುದ್ಧ ಆರಂಭವಾದ ಕಿಚ್ಚು ಜ್ವಾಲಾಮುಖಿಯಾಗಿ ಇಡೀ ಪ್ರದೇಶವನ್ನೇ ಬೆಂಕಿಗಾಹುತಿ ಮಾಡಿದೆ. ಅಲ್ಲಿನ ಸದ್ಯದ ದೃಶ್ಯಗಳು ಕರಾಳತೆಯನ್ನು ಎತ್ತಿ ತೋರಿದೆ.

## ನಿಮ್ಮ ತಾತಾ ವಿಲ್ ಬರೆದುಕೊಟ್ಟಿದ್ದಾರಾ? ಪ್ರತಾಪ್ ಸಿಂಹ ವಿರುದ್ಧ ಪ್ರದೀಪ್ ಈಶ್ವರ್ ಕಿಡಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಾಜಿ ಸಂಸದ ಪ್ರತಾಪ್ ಸಿಂಹ ವಿರುದ್ಧ ಶಾಸಕ ಪ್ರದೀಪ್ ಈಶ್ವರ್ ಕಿಡಿಕಾರಿದ್ದಾರೆ.

ಈ ಸಂಬಂಧ ಮಾತನಾಡಿದ ಪ್ರದೀಪ್ ಈಶ್ವರ್, ಪ್ರತಾಪ್ ಅವರಿಗೆ ಅಸ್ತಿತ್ವದ ಕೊರತೆ ಕಾಡುತ್ತಿದೆ. ನಾನು ಅವರಿಗೆ ಸಿಂಹ ಅನ್ನಲ್ಲ, ಸಿಂಹ ಘರ್ಜಿಸಬೇಕು, ಬಾಯಿ ಬಡಿದುಕೊಳ್ಳಬಾರದು. ಬಿಜೆಪಿಯವರು ಹೊರಗೆ ಹಾಕಿದ್ದಾರಾ ಗೊತ್ತಿಲ್ಲ, ಹೊರಗಂತೂ ಹಾಕಿದ್ದಾರೆ. ಹಿಂದೂ ಧರ್ಮ ನಿಮಗೆ ಅಂತ ಯತ್ನಾಳ್‌ಗೆ, ಪ್ರತಾಪ್ ಸಿಂಹಗೆ ನಿಮ್ಮ ತಾತಾ ಏನು ವಿಲ್ ಬರೆದುಕೊಟ್ಟಿದ್ದಾರಾ? ನಾನು ಮಾತನಾಡಿದರೆ ಪ್ರತಾಪ್ ಸಿಂಹ ಈಗ ಮೂರನೆ ಮಾನನಷ್ಟ ಮೊಕದ್ದಮೆ ಕೇಸ್ ಹಾಕುತ್ತಾರೆ. ನಿಮ್ಮನ್ನ ಯಾರು ಬಯ್ಯಬಾರದು, ನೀವು ಯಾರನ್ನ ಬೇಕಾದರು ಬಯ್ಯಬಹುದಾ? ನಾನು ಮಾತನಾಡಿದರೆ, ಲಕ್ಷ್ಮಣ್ ಮಾತನಾಡಿದರೆ ಸ್ಟೇ ತರುತ್ತಾರೆ ಎಂದು ಕಿಡಿಕಾರಿದರು.

ಪ್ರತಾಪ್‌ಗೆ ಕೆಲಸವಂತೂ ಇಲ್ಲ, ರಾಜ್ಯ ರಾಜಕಾರಣಕ್ಕೆ ಅವರು ಸೂಟ್ ಆಗಲ್ಲ. ಅಷ್ಟು ಅಹಂಕಾರ, ದುರಹಂಕಾರ ಇದ್ರೆ ರಾಜ್ಯ ರಾಜಕಾರಣಕ್ಕೆ ಒಗ್ಗಲ್ಲ. ಮೈಸೂರು ಎಂಪಿಯವರ ಸ್ಥಾನ ಪ್ರತಾಪ್‌ಗೆ ಬಿಟ್ಟು ಕೊಡ್ತಾರಾ, ಖಂಡಿತ ಇಲ್ಲ. ಮೈಸೂರು ಸಂಸ್ಥಾನವನ್ನೂ ಬಿಡಲ್ಲ, ಎಂಪಿ ಸ್ಥಾನವನ್ನೂ ಅವರು ಬಿಡಲ್ಲ. ಯತ್ನಾಳ್ ಹಾಗೂ ಪ್ರತಾಪ್ ಯುಪಿಯಲ್ಲಿ ಚುನಾವಣೆಯಲ್ಲಿ ನಿಲ್ಲುವುದು ಒಳ್ಳೆಯದು. ಪ್ರತಾಪ್ ಸೀತೆಯನ್ನು ನೋಡುವುದಕ್ಕೆ ಅಯೋಧ್ಯೆಗೆ ಹೋಗ್ತಾರೇನೋ, ಆದರೆ ನಾವೆಲ್ಲ ತಂದೆ ತಾಯಿಯಲ್ಲೇ ಶ್ರೀರಾಮಚಂದ್ರನನ್ನು, ಸೀತಾ ಮಾತೆಯನ್ನು ನೋಡುವ ಹಿಂದೂಗಳು ನಾವು. ನಿಮಗಿಂತ ದೊಡ್ಡ ಹಿಂದೂ ಭಕ್ತರು ಹಿಂದೂ ಆರಾಧಕರು ನಾವು. ಹಿಂದೂ ಧರ್ಮದ ಬಗ್ಗೆ ಇಷ್ಟು ಮಾತಾಡ್ತಾರಲ್ಲ, ಎಷ್ಟು ಹಿಂದೂ ದೇವಾಲಯಗಳನ್ನು ಉದ್ಧಾರ ಮಾಡಿದ್ದಾರೆ ಇವರು? ಯತ್ನಾಳ್ ಹಾಗೂ ಪ್ರತಾಪ್ ಫೈರ್ ಅಲ್ಲ, ಬಿಜೆಪಿಯವರು ಕಿತ್ತು ಬಿಸಾಡಿರುವ ಫೈರು ನೀವು ಎಂದು ಲೇವಡಿ ಮಾಡಿದರು.

### ಕಲುಷಿತ ನೀರು ಸೇವನೆ ವದಂತಿ; ಗುಡಿಸಾಗರ ಗ್ರಾಮದ ಕೆಲವರಲ್ಲಿ ವಾಂತಿ-ಬೇಧಿ

# ಆರೋಗ್ಯ ಸುರಕ್ಷತೆಗೆ ಶಾಸಕರ ಸೂಚನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ನವಲಗುಂದ ತಾಲೂಕಿನ ಗುಡಿಸಾಗರ ಗ್ರಾಮದಲ್ಲಿ ಸೆ. 9ರ ಸಂಜೆ ಕೆಲವರು ವಾಂತಿ ಬೇಧಿಯಿಂದ ಅಸ್ವಸ್ಥರಾಗಿ, ಸರಕಾರಿ ಆಸ್ಪತ್ರೆಗೆ ದಾಖಲಾಗಿದ್ದು, ಗ್ರಾಮದ ಕುಡಿಯುವ ನೀರಿನ ಕೆರೆಯಿಂದ ನೀರು ಕುಡಿದು ಅನಾರೋಗ್ಯವಾಗಿದೆ ಎಂದು ಹೇಳಲಾಗಿತ್ತು. ತಕ್ಷಣ ನವಲಗುಂದ ತಾಲೂಕು ಆಸ್ಪತ್ರೆಗೆ ವಾಂತಿ-ಬೇಧಿ ಪೀಡಿತರನ್ನು ದಾಖಲಿಸಿ ಸೂಕ್ತ ಚಿಕಿತ್ಸೆ ನೀಡಲಾಗಿದೆ.

ಬುಧವಾರ ಬೆಳಿಗ್ಗೆ ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿ.ಪಂ ಸಿಇಓ ಭುವನೇಶ ಪಾಟೀಲ ಹಾಗೂ ಎಸ್.ಪಿ ಗುಂಜನ್ ಆರ್ಯ ಅವರು ನವಲಗುಂದ ತಾಲೂಕು ಆಸ್ಪತ್ರೆಗೆ ಭೇಟಿ ನೀಡಿ, ಅಸ್ವಸ್ಥರನ್ನು ಮಾತನಾಡಿಸಿ, ಘಟನೆ ಬಗ್ಗೆ ಮಾಹಿತಿ ಪಡೆದರು.



ಈ ಸಂದರ್ಭದಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ಗ್ರಾಮಕ್ಕೆ ಸಮಯಕ್ಕೆ ಸರಿಯಾಗಿ ಶುದ್ಧೀಕರಿಸಿದ ನೀರನ್ನು ಸರಬರಾಜು ಮಾಡಬೇಕು. ಸ್ವಚ್ಛತೆ, ಶುದ್ಧ ನೀರಿನ ಬಗ್ಗೆ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಬೇಕು. ಆಸ್ಪತ್ರೆಗೆ ದಾಖಲಾಗಿರುವವರಿಗೆ ಉತ್ತಮ ಚಿಕಿತ್ಸೆ, ಉಚಿತ ಔಷಧಿ ನೀಡಬೇಕೆಂದು ನಿರ್ದೇಶಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಸುಮಾರು 19 ಜನ ತಾಲೂಕು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಎಲ್ಲರ ಆರೋಗ್ಯ ಸ್ಥಿರವಾಗಿದೆ. ಗ್ರಾಮಸ್ಥರು ಗ್ರಾಮದ ಕುಡಿಯುವ ನೀರಿನ ಕೆರೆಯಿಂದ ಈ ಘಟನೆ ಆಗಿದೆ ಎಂದು ದೂರಿದ್ದಾರೆ. ಈ ಕುರಿತು ಪರಿಶೀಲಿಸಿ, ವರದಿ ನೀಡಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇಇ ಅವರಿಗೆ ನಿರ್ದೇಶನ ನೀಡಲಾಗಿದೆ. ಈಗಾಗಲೇ ಗ್ರಾಮದ ಕೆರೆ, ಮೇಲ್ಮಟ್ಟದ ಜಲಸಂಗ್ರಹಗಾರ ಮತ್ತು ಮನೆಹತ್ತಿರದ ನಳದಿಂದ ನೀರು ಸಂಗ್ರಹಿಸಿ ಪರೀಕ್ಷೆಗಾಗಿ ಕಳುಹಿಸಲಾಗಿದೆ ಎಂದು ತಿಳಿಸಿದರು.

ಗ್ರಾಮದಲ್ಲಿ ನೀರು, ನೈರ್ಮಲ್ಯ, ನೀರನ್ನು ಶುದ್ಧೀಕರಿಸಿ, ಬಳಸುವ ಬಗ್ಗೆ ಜಾಗೃತಿ ಮೂಡಿಸಿ, ಆರೋಗ್ಯ ತಪಾಸಣೆಗಾಗಿ 30 ಜನ ಆಶಾ ಸದಸ್ಯರ ತಂಡ ರಚಿಸಿ, ಮನೆಮನೆ ಸಮೀಕ್ಷೆ ಆರಂಭಿಸಲಾಗಿದೆ. ಗುಡಿಸಾಗರ ಗ್ರಾಮದಲ್ಲಿ ಸುಮಾರು 1,600 ಮನೆ, ಅಂದಾಜು 2,500 ಜನಸಂಖ್ಯೆ ಇದ್ದು, ನಿನ್ನೆ ಮತ್ತು ಇವತ್ತು ಸೇರಿ 600 ಕ್ಕೂ ಹೆಚ್ಚು ಮನೆಗಳ ಸಮೀಕ್ಷೆ ಮಾಡಿ ಕುಟುಂಬಗಳ ಆರೋಗ್ಯ ಮಾಹಿತಿ ಸಂಗ್ರಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಗುಡಿಸಾಗರ ಆರೋಗ್ಯ ಇಲಾಖೆ ಉಪಕೇಂದ್ರಕ್ಕೆ ತಜ್ಞ ವೈದ್ಯರನ್ನು, ಶುಶ್ರೂಷಕಿಯರನ್ನು ನೇಮಿಸಲಾಗಿದ್ದು, ಗ್ರಾಮಸ್ಥರಿಗೆ ಸ್ಥಳದಲ್ಲಿ ಅಗತ್ಯ ಚಿಕಿತ್ಸೆ ನೀಡಿ, ಔಷಧಿ ವಿತರಿಸಲಾಗುತ್ತದೆ. ನೀರಿನ ಪರೀಕ್ಷಾ ವರದಿ ಬಂದ ತಕ್ಷಣ, ಅಧಿಕಾರಿಗಳ ತಪ್ಪು ಕಂಡು ಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದಾಗಿ ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ನವಲಗುಂದ ತಹಸೀಲ್ದಾರ ಸುಧೀರ ಸಾಹುಕಾರ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಂ. ಹೊನಕೇರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ಜಗದೀಶ ಪಾಟೀಲ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಭಾಗ್ಯಶ್ರೀ ಜಹಗೀರದಾರ, ತಾಲೂಕು ವೈದ್ಯಾಧಿಕಾರಿ ಡಾ. ಕರ್ಲವಾಡ, ಗುಡಿಸಾರ ಗ್ರಾ.ಪಂ ಅಧ್ಯಕ್ಷೆ ರತ್ನಮ್ಮ ಗುಡಿಸಲಮನಿ, ಪಿಡಿಓ ಎಸ್.ಎಂ. ಹೂಗಾರ ಸೇರಿದಂತೆ ಇತರರು ಇದ್ದರು.


ಜಿ.ಪಂ ಸಿಇಓ ಭುವನೇಶ ಪಾಟೀಲ ಮಾತನಾಡಿ, ಮಂಗಳವಾರ ಸಾಯಂಕಾಲ ಅಚಾನಕ್ಕಾಗಿ ಈ ಘಟನೆ ನಡೆದಿದೆ. ಪ್ರತಿದಿನ ಗ್ರಾಮಸ್ಥರು ಅದೇ ಕೆರೆಯ ಶುದ್ಧಿಕರಿಸಿದ ನೀರು ಕುಡಿಯುತ್ತಾರೆ. ಗ್ರಾಮದ ಆರ್.ಓಗಳನ್ನು ದುರಸ್ತಿಗೊಳಿಸಿ, ಇವತ್ತೇ ಆರಂಭಿಸಲು ಸೂಚಿಸಲಾಗಿದೆ. ಗುಡಿಸಾಗರ ಗ್ರಾಮದಲ್ಲಿ ಮೂರು ಆರ್‌ಓ ಪ್ಲಾಂಟ್‌ಗಳಿದ್ದು, ಸಣ್ಣ ಪುಟ್ಟ ದುರಸ್ತಿ ಇವೆ. ಅವುಗಳಲ್ಲಿ ಒಂದನ್ನು ಇಂದು ದುರಸ್ತಿಗೊಳಿಸಿ, ನೀರು ಸರಬರಾಜು ಮಾಡಲಾಗುತ್ತಿದೆ. ಉಳಿದವನ್ನು ತಕ್ಷಣ ಸರಿಪಡಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

## ಇಸ್ರೇಲ್ ಸಚಿವರಿಗೆ ಆತಿಥ್ಯ; ಕೇಂದ್ರ ಸರ್ಕಾರದ ವಿರುದ್ಧ ಕೇರಳ ಸಿಎಂ ವಾಗ್ದಾಳಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಇಸ್ರೇಲ್ ಹಣಕಾಸು ಸಚಿವ ಬೆಜಲೆಲ್ ಸ್ಮೋಟ್ರಿಚ್ ಅವರಿಗೆ ಆತಿಥ್ಯ ವಹಿಸಿದ್ದಕ್ಕಾಗಿ ಕೇಂದ್ರ ಸರ್ಕಾರವನ್ನು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ತೀವ್ರವಾಗಿ ಖಂಡಿಸಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, "ಸ್ಮೋಟ್ರಿಚ್ ಅವರನ್ನು ತೀವ್ರ ಬಲಪಂಥೀಯ ಉಗ್ರಗಾಮಿ. ಇಸ್ರೇಲ್‌ನ ಕ್ರೂರ ಆಕ್ರಮಣ ಮತ್ತು ವಿಸ್ತರಣಾವಾದಿ ಕಾರ್ಯಸೂಚಿಯ ಮುಖ್ಯಸ್ಥ" ಎಂದು ಬಣ್ಣಿಸಿದ್ದಾರೆ.



"ಗಾಜಾದಲ್ಲಿ ನರಮೇಧ ನಡೆಯುತ್ತಿರುವ ಸಮಯದಲ್ಲಿ, ನೆತನ್ಯಾಹು ಆಡಳಿತದ ಪ್ರತಿನಿಧಿಗಳೊಂದಿಗೆ ಒಪ್ಪಂದಗಳನ್ನು ಮಾಡಿಕೊಳ್ಳುವುದು ಪ್ಯಾಲೆಸ್ತೀನ್‌ನೊಂದಿಗಿನ ಭಾರತದ ಐತಿಹಾಸಿಕ ಒಗ್ಗಟ್ಟಿಗೆ ದ್ರೋಹವಾಗಿದೆ" ಎಂದು ಅವರು ಹೇಳಿದರು.

ಪ್ಯಾಲೆಸ್ತೀನ್‌ಗೆ ನ್ಯಾಯಯುತ ಮತ್ತು ಶಾಶ್ವತ ಶಾಂತಿಯ ಹಾದಿಯನ್ನು ಅನುಸರಿಸದೆ ಇರುವಾಗ ಇಸ್ರೇಲ್‌ನೊಂದಿಗೆ ಮಿಲಿಟರಿ, ಭದ್ರತೆ ಮತ್ತು ಆರ್ಥಿಕ ಸಂಬಂಧಗಳನ್ನು ಕಾಪಾಡಿಕೊಳ್ಳುವುದು ಶೋಚನೀಯ ಎಂದು ಎಡಪಂಥೀಯ ಅನುಭವಿ ಹೇಳಿದರು. ಸ್ಮೋಟ್ರಿಚ್ ಸೆಪ್ಟೆಂಬರ್ 8 ರಿಂದ 10 ರವರೆಗೆ ಮೂರು ದಿನಗಳ ಭಾರತ ಭೇಟಿಯಲ್ಲಿದ್ದಾರೆ.

ಅವರು ಸೋಮವಾರ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಪರಸ್ಪರ ದೇಶಗಳಲ್ಲಿ ಹೂಡಿಕೆಗಳನ್ನು ಉತ್ತೇಜಿಸುವ ಮತ್ತು ರಕ್ಷಿಸುವ ಗುರಿಯೊಂದಿಗೆ ದ್ವಿಪಕ್ಷೀಯ ಹೂಡಿಕೆ ಒಪ್ಪಂದಕ್ಕೆ ಸಹಿ ಹಾಕಿದರು.

## ನೇಪಾಳ: ಹಿಂಸಾಚಾರದ ನಂತರ ಸೇನೆ ಪ್ರವೇಶ; ದೇಶಾದ್ಯಂತ ನಿಷೇಧಾಜ್ಞೆ ಮತ್ತು ಕರ್ಫ್ಯೂ ಘೋಷಣೆ

■ವಿಜಯಸಾಕ್ಷಿ ಸುದ್ದಿ, ಕಠ್ಮಂಡು

ನೇಪಾಳದಲ್ಲಿ 'ಜೆನ್ ಜಡ್' ಯುವಕರ ನೇತೃತ್ವದ ಪ್ರತಿಭಟನೆಗಳು ದಶಕಗಳಲ್ಲಿಯೇ ಅತ್ಯಂತ ಕೆಟ್ಟ ರಾಜಕೀಯ ಪ್ರಕ್ಷುಬ್ಧತೆಯಾಗಿ ಪರಿವರ್ತನೆಗೊಂಡ ನಂತರ, ಎರಡು ದಿನಗಳ ಪ್ರತಿಭಟನೆಗಳಲ್ಲಿ 19 ಜನರು ಸಾವನ್ನಪ್ಪಿದ್ದಾರೆ. ಈ ಕಾರಣದಿಂದ ಪ್ರಧಾನಮಂತ್ರಿ ಕೆ.ಪಿ. ಶರ್ಮಾ ಓಲಿ ರಾಜೀನಾಮೆ ನೀಡಿದ್ದಾರೆ. ಇಂದು ಸೇನೆಯಿಂದ ನೇಪಾಳದಲ್ಲಿ ನಿಷೇಧಾಜ್ಞೆ ಮತ್ತು ದೇಶಾದ್ಯಂತ ಕರ್ಫ್ಯೂ ಜಾರಿಗೊಳಿಸಿ ಆದೇಶಿಸಲಾಗಿದೆ.

ನೇಪಾಳಿ ಸೇನೆಯು ಬುಧವಾರ (ಸೆಪ್ಟೆಂಬರ್ 10) ಸಂಜೆ 5ರವರೆಗೆ ಪ್ರತಿಬಂಧಕಾಜ್ಞೆ ಜಾರಿಯಲ್ಲಿ ಇರುತ್ತದೆ, ಅದರ ನಂತರ ಗುರುವಾರ ಬೆಳಿಗ್ಗೆ 6 ರಿಂದ ದೇಶಾದ್ಯಂತ ಕರ್ಫ್ಯೂ ಜಾರಿಯಾಗಲಿದೆ ಎಂದು ಹೇಳಿದೆ. ಪರಿಸ್ಥಿತಿಯ ಸುಧಾರಣೆಯನ್ನು ಅವಲಂಬಿಸಿ, ನಿರ್ಬಂಧಗಳು ಮುಂದಿನ ಸೂಚನೆ ಬರುವವರೆಗೆ ಜಾರಿಯಲ್ಲಿರುತ್ತವೆ. ಗಲಭೆಯ ಸಮಯದಲ್ಲಿ ಶಸ್ತ್ರಾಸ್ತ್ರ, ಮದ್ದುಗುಂಡುಗಳು ಅಥವಾ ಇತರ ಉಪಕರಣಗಳನ್ನು ಲೂಟಿ ಮಾಡಿರುವ ಅಥವಾ ಅವುಗಳನ್ನು ಹೊಂದಿರುವ ಪ್ರತಿಭಟನಾಕಾರರು ತಕ್ಷಣವೇ ಹತ್ತಿರದ ಭದ್ರತಾ ಸಂಸ್ಥೆಗೆ ಅವುಗಳನ್ನು ಹಸ್ತಾಂತರಿಸಬೇಕು ಎಂದು ಸೇನೆಯು ಮನವಿ ಮಾಡಿದೆ. ನಾಗರಿಕರು ಅನುಮತಿಯಿಲ್ಲದೆ ಭದ್ರತಾ ಪಡೆಯ ಸಮವಸ್ತ್ರಗಳನ್ನು ಧರಿಸಬಾರದು ಎಂದು ಕೂಡ ತಿಳಿಸಿದೆ.

ಪ್ರತಿಭಟನೆಯ ಸಮಯದಲ್ಲಿ ಜೀವ ಮತ್ತು ಆಸ್ತಿಪಾಸ್ತಿ ನಷ್ಟಕ್ಕೆ ಸೇನೆಯು ವಿಷಾದ ವ್ಯಕ್ತಪಡಿಸಿದೆ, ಆದರೆ "ಅರಾಜಕ ಶಕ್ತಿಗಳು" ಪ್ರತಿಭಟನೆಗಳಲ್ಲಿ ನುಸುಳಿದ್ದು, ಬೆಂಕಿ ಹಚ್ಚುವುದು, ಲೂಟಿ, ವಿಧ್ವಂಸಕ ಕೃತ್ಯಗಳು, ಹಿಂಸಾತ್ಮಕ ಹಲ್ಲೆಗಳು ಮತ್ತು ಲೈಂಗಿಕ ಹಿಂಸಾಚಾರಕ್ಕೆ ಪ್ರಯತ್ನಿಸುತ್ತಿದ್ದಾರೆ ಎಂದು ಎಚ್ಚರಿಕೆ ನೀಡಿದೆ.

### ಅಕ್ಕನ ಬಳಗದಲ್ಲಿ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆಯಲ್ಲಿ ಅನಿಲ ವೈದ್ಯ

# ಜೀವನದಲ್ಲಿ ಶಿಕ್ಷಣದ ಪಾತ್ರ ಮಹತ್ವದ್ದು



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರ ಜೀವನದಲ್ಲಿ ಶಿಕ್ಷಣವು ಅತ್ಯಂತ ಮಹತ್ವದ ಪಾತ್ರವನ್ನು ವಹಿಸುತ್ತದೆ. ವ್ಯಕ್ತಿಯನ್ನು ಅತ್ಯುನ್ನತ ಸ್ಥಾನಕ್ಕೆ ತಲುಪಿಸುವಲ್ಲಿ ಶಿಕ್ಷಣ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಆದ್ದರಿಂದ ಎಲ್ಲರೂ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ನಿವೃತ್ತ ಉಪನ್ಯಾಸಕ, ಹಾಸ್ಯ ಕಲಾವಿದ ಅನಿಲ ವೈದ್ಯ ಹೇಳಿದರು.

ಸೋಮವಾರ ನಗರದ ಅಕ್ಕನ ಬಳಗದಲ್ಲಿ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸಕರಾಗಿ ಪಾಲ್ಗೊಂಡು ಮಾತನಾಡಿದ ಅವರು, ಶಿಕ್ಷಣವು ಜ್ಞಾನ ಕೌಶಲ್ಯ ಮತ್ತು ಸಾಧನೆಯ ಮಾರ್ಗವನ್ನು ಒದಗಿಸುತ್ತದೆ. ಜೊತೆಗೆ ಶಿಕ್ಷಣವು ಸರ್ವಾಂಗೀಣ ಅಭಿವೃದ್ಧಿಗೆ ದಾರಿ ಮಾಡಿಕೊಡುತ್ತದೆ. ಈ ಹಿಂದಿನ ಶಿಕ್ಷಣ ಪದ್ಧತಿಯಲ್ಲಿ ಹಲವಾರು ಗುಣಾತ್ಮಕ ಬದಲಾವಣೆಯನ್ನು ತರುವ ಮೂಲಕ ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಕ್ರಮ ಜರುಗಿಸಲಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಅಕ್ಕನ ಬಳಗದ ಅಧ್ಯಕ್ಷೆ ಜಯಶ್ರೀ ಹುಬ್ಬಳ್ಳಿ ಮಾತನಾಡಿದರು. ಅನಿಲ ವೈದ್ಯ ಹಾಗೂ ಭಾರತಿ ವಿಶಾಲವಾಡಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬೀನಾ ಮಾನ್ವಿ ಪ್ರಾರ್ಥಿಸಿದರು. ಸುವರ್ಣಾ ವಸ್ತ್ರದ ಹಾಗೂ ಬೀನಾ ಮಾನ್ವಿ ಭಕ್ತಿ ಸೇವೆ ವಹಿಸಿದ್ದರು. ಜ್ಯೋತಿ ದಾನಪ್ಪಗೌಡ್ರ ನಿರೂಪಿಸಿದರು. ಕಾರ್ಯದರ್ಶಿ ಜಯಶ್ರೀ ಪಾಟೀಲ ವಂದಿಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷ ಕಸ್ತೂರಿ ಹಿರೇಗೌಡರ, ಟ್ರಸ್ಟಿಗಳಾದ ಅನ್ನಪೂರ್ಣ ಮಾಳೆಕೊಪ್ಪಮಠ, ಶಾಂತಾ ಗೌಡರ, ಉಷಾ ದಡೂತಿ, ಶಿವಲೀಲಾ ಕುರಡಗಿ, ನಾಗರತ್ನಾ ಹುಬ್ಬಳ್ಳಿಮಠ, ಮೀನಾಕ್ಷಿ ಸಜ್ಜನ, ಪ್ರೇಮಾ ಮೇಟಿ, ಗೀತಾ ಮಾನ್ವಿ, ಶಾರದಾ ಹಿರೇಮಠ, ಸುಜಾತಾ ಮಾನ್ವಿ, ಶಶಿರೇಖಾ ಶಿಗ್ಲಿಮಠ, ಶಾಂತಾ ಸಂಕನೂರ, ಸುವರ್ಣ ವಸ್ತ್ರದ, ಲಲಿತಾ ಬಾಳಿಹಳ್ಳಿಮಠ, ಶೈಲಾ ಹಿರೇಮಠ, ಪಾರ್ವತಿದೇವಿ ಮಾಳೇಕೊಪ್ಪಮಠ ಅಲ್ಲದೆ ಶೈಲಜಾ ಕವಲೂರ, ವಿದ್ಯಾ ಹುಲಬನ್ನಿ, ರೇಣುಕಾ ಅಮಾತ್ಯ ಮುಂತಾದವರಿದ್ದರು.

ನ್ಯಾಯವಾದಿ ಭಾರತಿ ವಿಶಾಲವಾಡಿ ಮಾತನಾಡಿ, ಒತ್ತಡಗಳನ್ನು ನಿಗ್ರಹಿಸಿ ಶಾಂತಿ-ಸಮಾಧಾನದಿಂದ ಬದುಕು ನಡೆಸುವ ಬಗೆಯನ್ನು ವಿವರಿಸಿ, ನಿತ್ಯ ಪ್ರಾರ್ಥನೆ, ಧ್ಯಾನ, ಲಘು ವ್ಯಾಯಾಮ, ಸಂಗೀತ ಆಲಿಕೆಯಿಂದ ಒತ್ತಡವನ್ನು ಕಡಿಮೆ ಮಾಡಿಕೊಳ್ಳಲು ಅವಕಾಶವಿದೆ. ಹಿತ-ಮಿತ ಆಹಾರ ಸೇವಿಸುವ ಮೂಲಕ ಸಮತೋಲನ ಕಾಯ್ದುಕೊಳ್ಳಬೇಕು. ಅವಸರ, ಆವೇಶ, ಸಿಟ್ಟು, ಉದ್ವೇಗಕ್ಕೆ ಒಳಗಾಗದಂತೆ ಶಾಂತಚಿತ್ತದ ಜೀವನ ಶೈಲಿ ರೂಢಿಸಿಕೊಂಡಲ್ಲಿ ಬದುಕು ಬಲು ಸುಂದರ ಎಂದರು.

## ದಾನ ಮಾಡುವುದರಿಂದ ಪುಣ್ಯ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದಾನವು ಪುಣ್ಯವನ್ನು ತರುತ್ತದೆ, ಬಡವರಿಗೆ ಸಹಾಯ ಮಾಡುತ್ತದೆ. ಸಮಾಜದಲ್ಲಿ ಸಮಾನತೆ ಹಾಗೂ ಸಹಾನುಭೂತಿಯ ಭಾವನೆಯನ್ನು ಬೆಳೆಸುತ್ತದೆ. ನಿಸ್ವಾರ್ಥವಾಗಿ, ಪೂರ್ಣ ಹೃದಯದಿಂದ, ಸಂದೇಹವಿಲ್ಲದೆ ಮಾಡುವ ದಾನವು ಉತ್ತಮ ಫಲಿತಾಂಶಗಳನ್ನು ನೀಡುತ್ತದೆ ಎಂದು ಹಂಪಸಾಗರ, ನರೇಗಲ್ಲ ಶ್ರೀಮದ್ ರಂಭಾಪೂರಿ ವೀರಸಿಂಹಾಸನ ನವಲಿ ಕಟ್ಟಿಮನಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ನರೇಗಲ್ಲನ ನವಲಿ ಕಟ್ಟಿಮನಿ ಹಿರೇಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿದ್ದ ಶ್ರೀ ರುದ್ರಾಭಿಷೇಕ, ಅಷ್ಟೋತ್ತರ ಶತನಾಮಾವಳಿ ಮಹಾಪೂಜಾ ಮುಕ್ತಾಯ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



ದಾನವು ಕೇವಲ ಹಣವನ್ನು ಕೊಡುವುದಲ್ಲ, ಬದಲಿಗೆ ನಿಮ್ಮ ಸಮಯ, ಶಕ್ತಿ ಮತ್ತು ಸಂಪನ್ಮೂಲಗಳನ್ನು ನಿಸ್ವಾರ್ಥವಾಗಿ ಕೊಡುಗೆ ನೀಡುವುದಾಗಿದೆ. ಈ ಉತ್ತಮ ಕಾರ್ಯವು ವ್ಯಕ್ತಿಗತ ಏಳಿಗೆ ಮತ್ತು ಸಾಮಾಜಿಕ ಅಭಿವೃದ್ಧಿಗೆ ಕಾರಣವಾಗುತ್ತದೆ. ನಾವು ಮಾಡಿರುವ ಪರೋಪಕಾರ ರೂಪದ ದಾನ ಎಂದೂ ವ್ಯರ್ಥವಾಗದು. ದಾನ ಮಾಡುವುದನ್ನು ರೂಢಿಸಿಕೊಳ್ಳೋಣ ಮತ್ತು ಕೊಡುವುದಲ್ಲಿರುವ ಸಂತೋಷವನ್ನು ಅನುಭವಿಸೋಣ ಎಂದರು.

ಸೆ. 22ರಿಂದ ಅಕ್ಟೋಬರ್ 2ರವರೆಗೆ ಬಸವಕಲ್ಯಾಣದಲ್ಲಿ ಜರುಗಲಿರುವ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನಕ್ಕೆ ಶ್ರೀಮಠದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಜಗದ್ಗುರುಗಳ ದರ್ಶನಾಶೀರ್ವಾದ ಪಡೆದುಕೊಳ್ಳಬೇಕು ಎಂದರು.

ಶ್ರೀ ಸದ್ಗುರು ಮಹಾದೇವ ತಾತನವರ ದಿವ್ಯ ಪಂಚಲೋಹದ ಮೂರ್ತಿಗೆ ಮಹಾರುದ್ರ ಅಭಿಷೇಕ ಹಾಗೂ ಶ್ರೀ ಸದ್ಗುರು ಮಹಾದೇವ ತಾತನವರ ಕೃಪ ಸಂಜಾತರಾದ ಪರಮಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳವರ ಭಾವಚಿತ್ರಕ್ಕೆ ಅಷ್ಟೋತ್ತರ ಶತನಾಮಾವಳಿ, ಮಹಾ ಮಂಗಳಾರತಿ, ಅನ್ನ ಸಂತರ್ಪಣೆ ಜರುಗಿತು.

ಅರ್ಚಕ ಮಹಾದೇವಸ್ವಾಮಿ ನವಲಿಹಿರೇಮಠ, ಉಮೇಶ ಉಮಚಗಿ, ಮಹಾದೇವಪ್ಪ ಬೇವಿನಕಟ್ಟಿ, ವೀರಪ್ಪ ಹುಲ್ಲೂರ, ಕೆ.ಪಿ. ಸಾಲಿಮಠ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಶಿವಪುತ್ರಪ್ಪ ಸಂಗನಾಳ, ಪ್ರಭು ಪೂಜಾರ, ವಿಶ್ವನಾಥ ಕೋಡಿಕೊಪ್ಪಮಠ, ಗವಿಸಿದ್ದಪ್ಪ ಗೊಡಚಪ್ಪನವರ, ರತ್ನಮ್ಮ ಧಡೇಸೂರಮಠ ಮುಂತಾದವರಿದ್ದರು. ಮುತ್ತಪ್ಪ ಹಡಪದ ನಿರ್ವಹಿಸಿದರು.

## ಹಾನಿಗೊಳಗಾದ ಜಮೀನುಗಳಿಗೆ ತಹಸೀಲ್ದಾರರ ಭೇಟಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಹೋಬಳಿ ವ್ಯಾಪ್ತಿಯಲ್ಲಿ ಬರುವ ಡಂಬಳ ಹಾಗೂ ಡೋಣಿ ಗ್ರಾಮಗಳ ರೈತರ ಜಮೀನುಗಳ ಮಧ್ಯೆ ಹಾದು ಹೋಗಿರುವ ಶಿಂಗಟಾಲೂರ ಏತ ನೀರಾವರಿ ಯೋಜನೆ ಕಾಲುವೆಯ ಅಕ್ಕಪಕ್ಕ ನೀರು ಬಸಿಯುವಿಕೆಯಿಂದ ಜಮೀನಿನಲ್ಲಿ ಹಾಕಿದ ವಿವಿಧ ಬೆಳೆಗಳು ಜವುಳಿನಿಂದಾಗಿ ಹಾನಿಗೊಳಗಾಗಿದ್ದು, ಜಮೀನುಗಳಿಗೆ ಮುಂಡರಗಿ ತಹಸೀಲ್ದಾರ ಎರ್ರಿಸ್ವಾಮಿ ಪಿ.ಎಸ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, ಸಿಂಗಟಾಲೂರ ಏತನೀರಾವರಿ ಮೂಲಕ ಹರಿಯುವ ನೀರಿನ ಜವಳು ಕುರಿತು ಮುಂದಿನ ಕ್ರಮಕ್ಕಾಗಿ ಸರಕಾರದ ಗಮನಕ್ಕೆ ತಂದು ಶಾಶ್ವತ ಪರಿಹಾರಕ್ಕಾಗಿ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ವರದಿ ಸಲ್ಲಿಸುತ್ತೇವೆ ಎಂದು ರೈತರಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಉಪತಹಸೀಲ್ದಾರ ಎಸ್.ಎಸ್. ಬಿಚ್ಚಾಲಿ, ಕಂದಾಯ ನಿರೀಕ್ಷಕ ಪ್ರಭು ಬಾಗಲಿ, ಸಾಮಾಜಿಕ ಕಾರ್ಯಕರ್ತ ಮಂಜಯ್ಯಸ್ವಾಮಿ ಅರವಟಗಿಮಠ, ನಾಗಲಿಂಗಯ್ಯ ಮುತ್ತಾಳಮಠ, ಶಾಂತಪ್ಪ ಬರಗಲ್ಲ, ಪರಶುರಾಮ ಮರಡಿ, ಶಂಕರಗೌಡ ಹೊಸಮನಿ, ಶರಣಯ್ಯ ಮುತ್ತಾಳಮಠ ಡಂಬಳ ಮತ್ತು ರೈತರು ಇದ್ದರು.

## ಗದಗ ಜಿಲ್ಲಾಡಳಿತ ಕಚೇರಿ ಆವರಣದಲ್ಲಿ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

59ನೇ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಅಂಗವಾಗಿ ಗದಗ ಜಿಲ್ಲಾ ಮಟ್ಟದ ಸಾಕ್ಷರತಾ ದಿನಾಚರಣೆಯನ್ನು ಗದಗ ಜಿಲ್ಲಾಡಳಿತ ಕಚೇರಿ ಆವರಣದಲ್ಲಿ ಸೋಮವಾರ ಆಚರಿಸಲಾಯಿತು.

ಜಿ.ಪಂ ಯೋಜನಾ ನಿರ್ದೇಶಕ ಎಮ್.ವಿ. ಚಳಗೇರಿ ಸಾಕ್ಷರತಾ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಜಿಲ್ಲೆಯಲ್ಲಿ ಅನುಷ್ಠಾನದಲ್ಲಿರುವ ಸಾಕ್ಷರತಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಮಾಡಬೇಕು. 2022-2027ರವರೆಗಿನ 5 ವರ್ಷಗಳ ಅವಧಿಯಲ್ಲಿ ಕರ್ನಾಟಕ ರಾಜ್ಯವನ್ನು ಸಂಪೂರ್ಣ ಸಾಕ್ಷರ ನಾಡನ್ನಾಗಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.



ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಎಸ್.ಎಸ್. ಕುರಿಯವರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತಾನಾಡಿ, ಜಿಲ್ಲೆಯಲ್ಲಿ ರಾಜ್ಯ ಮಟ್ಟದ ಸಂಪೂರ್ಣ ಸಾಕ್ಷರ ಗ್ರಾಮ ಪಂಚಾಯತ ಸಾಕ್ಷರತಾ ಕಾರ್ಯಕ್ರಮ, ಜಿಲ್ಲಾ ಮಟ್ಟದ ಲಿಂಕ್ ಡಾಕ್ಯೂಮೆಂಟ್ ಜನಶಿಕ್ಷಣ ನಿಲಯ ಯೋಜನೆಯಡಿ ಮೂಲ ಸಾಕ್ಷರತಾ ಕಾರ್ಯಕ್ರಮ ಮತ್ತು ರಾಷ್ಟ್ರ ಮಟ್ಟದ ನವಭಾರತ ಸಾಕ್ಷರತಾ ಕಾರ್ಯಕ್ರಮಗಳನ್ನು ಜಿಲ್ಲೆಯ ಶಿಕ್ಷಣ ಅಧಿಕಾರಿಗಳು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಡಿ.ವೈ.ಪಿ.ಸಿ ಸರ್ವ ಶಿಕ್ಷಣ ಅಭಿಯಾನ, ಎಮ್.ಹೆಚ್. ಕಂಬಳಿ ಮಾತನಾಡಿ, ವಿದ್ಯಾವಂತರು ಅನಕ್ಷರಸ್ಥರಿಗೆ ಅಕ್ಷರ ಜ್ಞಾನ ನೀಡಲು ಮುಂದಾಗಬೇಕು. ಜನರು ಸ್ವಾವಲಂಬಿಯಾಗಿ ಬದುಕಲು ಸಾಕ್ಷರತೆ ಒಂದು ಊರುಗೋಲು ಇದ್ದಂತೆ ಎಂದು ಹೇಳಿದರು.

ಶಾಸ್ತ್ರೀಜಿ ಬಿ.ಎಡ್ ಕಾಲೇಜಿನ ಉಪನ್ಯಾಸಕ ರಾಜು ಕೇರೂರ ಹಾಗೂ ಕಾಲೇಜಿನ ಪ್ರಶಿಕ್ಷಣಾರ್ಥಿಗಳು, ವಿವಿಧ ಸಾಕ್ಷರತಾ ಕಾರ್ಯಕ್ರಮಗಳ ಬೋಧಕರು ಪಾಲ್ಗೊಂಡಿದ್ದರು. ಡಯಟ್‌ದ ಪ್ರಾಚಾರ್ಯರಾದ ಮಂಗಳಾ ಬಿ.ತಾಪಸ್ಕರ ಸಾಕ್ಷರತಾ ಪ್ರಮಾಣ ವಚನವನ್ನು ಬೋಧಿಸಿದರು.

ಹಿರಿಯ ಉಪನ್ಯಾಸಕ ಜಿ.ಎಮ್. ಮುಂದಿನಮನಿ, ಬಿ.ಎಫ್. ಅರವಟಗಿ, ಜೆ.ಎ. ಬಾವಿಕಟ್ಟಿ, ಎಸ್.ಪಿ. ಪ್ರಭಯ್ಯನಮಠ, ಎಸ್. ಆರ್. ನದಾಫ್, ಎಸ್.ಬಿ. ಬನ್ನಿಕಲ್, ಜೆ. ಹುಲಗೇರಿ, ಜಿ.ಡಿ. ದಾಸರ, ಸೇರಿದಂತೆ ಗ್ರಾಮೀಣ ವಿಭಾಗದ ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳು, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳು, ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ದೈಹಿಕ ಶಿಕ್ಷಕ ಎಸ್. ಮುಳಗುಂದ ಧ್ವಜಾರೋಹಣ ಕಾ೦ರ್ು೦ಕ್ರ೦ವ೦ು೦ವ೦ನ್೦ು ನೆರವೇರಿಸಿಕೊಟ್ಟರು. ಅಶೋಕ ಹಾದಿ ಕಾರ್ಯಕ್ರಮ ನಿರೂಪಿಸಿದರು. ಕ್ಷೇತ್ರ ಸಂಪನ್ಮೂಲ ವ್ಯಕಿ ಪಿ.ಡಿ. ಮಂಗಳೂರ ವಂದಿಸಿದರು.

## ವಿಶ್ವಕರ್ಮ ಸಹಕಾರಿ ಸಂಘಗಳ ಮಹಾಸಭೆ ಸೆ.14ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ವಿಶ್ವಕರ್ಮ ಮಹೋತ್ಸವದ ಅಂಗವಾಗಿ ರಕ್ತದಾನ ಶಿಬಿರವನ್ನು ಸೆ. 14ರಂದು ಬೆಳಿಗ್ಗೆ 9.30 ಗಂಟೆಗೆ ಹಾಗೂ ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘದ ಹಾಗೂ ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘ ಇವುಗಳ 7ನೇ ವರ್ಷದ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಬೆಳಿಗ್ಗೆ 11 ಗಂಟೆಗೆ ನಗರದ ವಿಜಯನಗರ ಬಡಾವಣೆಯ ವಿಶ್ವಕರ್ಮ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ರಕ್ತದಾನ ಶಿಬಿರವನ್ನು ಬೆಳಗ್ಗೆ 9.30ಕ್ಕೆ ನಗರಸಭೆ ಸದಸ್ಯರಾದ ಮಹಬೂಬಸಾಬ್ ಡಿ.ನದಾಫ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಖ್ಯಾತ ವೈದ್ಯ ಡಾ. ಆರ್.ಡಿ. ಪವಾಡಶೆಟ್ಟರ ಹಾಗೂ ಕೆ.ಎಚ್. ಪಾಟೀಲ ಮೆಡಿಕಲ್ ಕಾಲೇಜಿನ ವೈದ್ಯರಾದ ಡಾ. ಶ್ರೀಧರ ವ್ಹಿ.ಬಡಿಗೇರ ಆಗಮಿಸುವರು. ಅಧ್ಯಕ್ಷತೆಯನ್ನು ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಹಾಗೂ ನಿವೃತ್ತ ಪ್ರಾಚಾರ್ಯರಾದ ರಾಜಗೋಪಾಲ ಡಿ.ಕಡ್ಲಿಕೊಪ್ಪ ವಹಿಸುವರು.

ಬೆಳಿಗ್ಗೆ 11 ಗಂಟೆಗೆ ಜರುಗುವ ಸಹಕಾರಿ ಪತ್ತಿನ ಸಂಘಗಳ ವಾರ್ಷಿಕ ಸರ್ವ ಸಾಧಾರಣ ಸಭೆಯ ಸಾನ್ನಿಧ್ಯವನ್ನು ಶಿರೋಳ ಜಗದ್ಗುರು ಶ್ರೀ ಯಚ್ಚರಸ್ವಾಮಿ ಮಠದ ಶ್ರೀ ಅಭಿನವ ಯಚ್ಚರ ಮಹಾಸ್ವಾಮೀಜಿ ವಹಿಸುವರು. ಸಹಕಾರ ಇಲಾಖೆಯ ನಿವೃತ್ತ ಸಹಾಯಕ ನಿಬಂಧಕರಾದ ಬಿ.ಎಂ. ಬಿಳಿಯಲಿ ಉದ್ಘಾಟಿಸುವರು. ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ಎ.ಎನ್. ಬಡಿಗೇರ ಅಧ್ಯಕ್ಷತೆ ವಹಿಸುವರು. ವಿ.ನೌ.ಪ.ಸ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ, ಉಪಾಧ್ಯಕ್ಷ ರವೀಂದ್ರ ಎಂ.ಕಮ್ಮಾರ, ಕಾರ್ಯದರ್ಶಿ ಶ್ರೀಕಾಂತ ಕದಡಿ, ವಿ.ಮ.ಪ.ಸ ಸಂಘದ ಅಧ್ಯಕ್ಷರಾದ ರಿಂದಮ್ಮ ತೋಟಗಂಟಿ, ಉಪಾಧ್ಯಕ್ಷರಾದ ಪುಷ್ಪ ಎ.ವಿಶ್ವಜ್ಞ, ಕಾರ್ಯದರ್ಶಿ ವಾಣಿಶ್ರೀ ಕಡ್ಲಿಕಪ್ಪ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

### ಶಿರಹಟ್ಟಿ ತಹಸೀಲ್ದಾರ ಕಚೇರಿಯಲ್ಲಿ ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

# ಸಾರ್ವಜನಿಕರ ಕೆಲಸಗಳನ್ನು ತ್ವರಿತವಾಗಿ ಮಾಡಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರ ಕೆಲಸ-ಕಾರ್ಯಗಳನ್ನು ನಿಗದಿತ ಸಮಯದಲ್ಲಿ ಮಾಡಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರನ್ನು ಅಲೆದಾಡಿಸುವುದು, ಸತಾಯಿಸುವುದು ಕಂಡು ಬಂದರೆ ಅಂಥಹವರ ಮೇಲೆ ಲೋಕಾಯುಕ್ತ ಕಾಯ್ದೆಯಂತೆ ಕ್ರಮ ಜರುಗಿಸಲಾಗುವುದು ಎಂದು ಗದಗ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಲಿಂಗಪ್ಪ ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಗದಗ ಲೋಕಾಯುಕ್ತ ಅಧಿಕಾರಿಗಳು ಆಯೋಜಿಸಿದ್ದ ಶಿರಹಟ್ಟಿ ತಾಲೂಕಾ ಮಟ್ಟದ ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರಕಾರಿ ಶಾಲೆಗಳಲ್ಲಿ 3 ತಿಂಗಳಿಗೊಮ್ಮೆ ಕಡ್ಡಾಯವಾಗಿ ವಿದ್ಯಾರ್ಥಿನಿಯರ ಆರೋಗ್ಯ ತಪಾಸಣೆ ನಡೆಸಬೇಕು. ವಸತಿ ಶಾಲೆಗಳಲ್ಲಿ ವಿದ್ಯಾರ್ಥಿನಿಯರು ರಜೆ ಹೋಗಿ ಬಂದ ನಂತರವೂ ಸಹ ಮೆಡಿಕಲ್ ಚೆಕ್‌ಅಪ್ ಮಾಡಿಸಬೇಕು. ಈ ವಿಷಯವನ್ನು ಆರೋಗ್ಯ, ಶಿಕ್ಷಣ ಮತ್ತು ಬಿಸಿಎಂ ಇಲಾಖೆಯ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಪೋಕ್ಸೋ ಕಾಯ್ದೆ ಗಂಭೀರ ಮತ್ತು ಅಪಾಯಕಾರಿಯಾಗಿದೆ. ಅಂಗನವಾಡಿ ಕೇಂದ್ರಗಳಲ್ಲೂ ಸಹ ಶುಚಿತ್ವ ಮತ್ತು ಆಹಾರದ ಗುಣಮಟ್ಟವನ್ನು ಕಾಪಾಡಬೇಕು. ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಸಹಜ ಸ್ಥಿತಿಯತ್ತ ತರುವಂತಹ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಅಗ್ನಿಶಾಮಕ ಸಿಬ್ಬಂದಿಗಳು ಸರಕಾರಿ ಶಾಲೆಗಳು, ವಸತಿ ಶಾಲೆಗಳಲ್ಲಿಯ ಅಡುಗೆ ಸಹಾಯಕಿಯರಿಗೆ ಅಗ್ನಿ ನಂದಿಸುವ ಕುರಿತು ಜಾಗೃತಿ ಮೂಡಿಸಬೇಕು. ಶಿಕ್ಷಣ ಮತ್ತು ಆರೋಗ್ಯ ಇಲಾಖೆಗಳು ಆಡಳಿತ ವ್ಯವಸ್ಥೆಯಲ್ಲಿ ಪ್ರಮುಖ ಪಾತ್ರ ವಹಿಸಿವೆ. ಆದ್ದರಿಂದ ಸರಕಾರಿ ಶಾಲೆಗಳಲ್ಲಿ ಅಗತ್ಯ ಮೂಲ ಸೌಲಭ್ಯ ಕಲ್ಪಿಸಬೇಕು.

ಸರಕಾರಿ ಶಾಲೆಗಳು ಉಳಿಯುವಂತೆ ಮಾಡಬೇಕು. ಇಲ್ಲದೇ ಹೋದರೆ ಖಾಸಗಿ ಶಾಲೆಗಳ ಡೊನೇಶನ್ ಹಾವಳಿ ಹೆಚ್ಚಾಗುತ್ತದೆ. ಸರಕಾರಿ ಆಸ್ಪತ್ರೆಗಳಲ್ಲಿಯೂ ಸಹ ಸಾರ್ವಜನಿಕರ ಆರೋಗ್ಯ ಕಾಪಾಡಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮ ಮದ್ಯ ಮಾರಾಟವನ್ನು ತಡೆಗಟ್ಟಬೇಕು. ಎಪಿಎಂಸಿ, ಪಟ್ಟಣ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬರುವ ಮಾರಾಟ ಮಳಿಗೆಗಳು ಯಾರಿಗೆ ಟೆಂಡರ್ ಆಗಿರುತ್ತವೆಯೋ ಅವರೇ ಉಪಯೋಗಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ಹೇಳಿದರು.

ಸಭೆಯಲ್ಲಿ ಒಟ್ಟು 13 ದೂರುಗಳು ಸ್ವೀಕೃತವಾಗಿದ್ದು, ಇದರಲ್ಲಿ ಪಟ್ಟಣ ಪಂಚಾಯಿತಿ-4, ಪೊಲೀಸ್-1, ಹೆಸ್ಕಾಂ-1 ಹಾಗೂ ಇತರೆ-1 ಇಲಾಖೆಗೆ ಸಂಬಂಧಿಸಿದಂತೆ ದೂರುಗಳು ಬಂದಿವೆ. ಇವುಗಳಲ್ಲಿ 6 ದೂರುಗಳಲ್ಲಿ ಲೋಕಾಯುಕ್ತರು ಫಾರ್ಮ್ 1 ಮತ್ತು 2ನ್ನು ನೀಲಾಗಿದೆ.

ತಹಸೀಲ್ದಾರ ರಾಘವೇಂದ್ರ ರಾವ್ ಕೆ, ತಾ.ಪಂ ಇಓ ಆರ್.ವಿ. ದೊಡ್ಡಮನಿ, ಲೋಕಾಯುಕ್ತ ಇನ್ಸ್‌ಪೆಕ್ಟರ್ ಎಸ್.ಎಸ್. ತೇಲಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯಕುಮಾರ ಬಿರಾದಾರ ಮಾತನಾಡಿ, ಸಾರ್ವಜನಿಕ ಅಹವಾಲು ಸಂದರ್ಭದಲ್ಲಿ ಗಂಭೀರ ಸ್ವರೂಪದ ದೂರುಗಳನ್ನು ದೂರುದಾರರಿಂದ ನೇರವಾಗಿ ಲೋಕಾಯುಕ್ತ ನಿಯಮಾನುಸಾರ ಫಾರ್ಮ್ 1 ಮತ್ತು 2ರ ಅರ್ಜಿಯನ್ನು ಸ್ವೀಕರಿಸಲಾಗುವುದು. ಈ ಫಾರ್ಮ್‌ಗಳು ನೇರವಾಗಿ ರಾಜ್ಯ ಲೋಕಾಯುಕ್ತರ ಬಳಿ ಅಲ್ಲಿಯ ಸೆಶೆನ್ ನ್ಯಾಯಾಧೀಶರಿಂದ ಅರ್ಜಿಯ ವಿಚಾರಣೆ ನಡೆಯುತ್ತದೆ. ಅಲ್ಲಿ ಸಂಬಂಧಿಸಿದ ಅರ್ಜಿದಾರರು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳನ್ನು ಕರೆಯಿಸಿ ವಿಚಾರಣೆ ಮಾಡುತ್ತಾರೆ. ಆದ್ದರಿಂದ ಎಲ್ಲ ಇಲಾಖಾ ಅಧಿಕಾರಿಗಳು ಸಾರ್ವಜನಿಕರ ಕೆಲಸ-ಕಾರ್ಯಗಳನ್ನು ತ್ವರಿತಗತಿಯಲ್ಲಿ ನಡೆಯುವಂತೆ ಎಚ್ಚರಿಕೆ ವಹಿಸುವುದು ಅವಶ್ಯ ಎಂದು ಅಧಿಕಾರಿಗಳಿಗೆ ತಿಳಿಸಿದರು.

## ಅಕ್ರಮ ಗಣಿಗಾರಿಕೆ ನಷ್ಟ ವಸೂಲಾತಿಗೆ ಕ್ರಮ

▶▶ಮೊದಲನೇ ಪುಟದಿಂದ

ಸಾಧ್ಯವಾಗಿದ್ದು, ಈ ಯಶಸ್ಸಿಗಾಗಿ ಮುಖ್ಯಮಂತ್ರಿಗಳು ಮತ್ತು ಮಸೂದೆಗೆ ಅಂಕಿತ ಹಾಕುವ ಮೂಲಕ ಸಹಕರಿಸಿದ ರಾಜ್ಯಪಾಲರನ್ನು ಅಭಿನಂದಿಸುವುದಾಗಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅಕ್ರಮ ಗಣಿಗಾರಿಕೆ ನಷ್ಟ ವಸೂಲಾತಿ ಮತ್ತು ಜಪ್ತಿಗಾಗಿ ಅಪರ ಮುಖ್ಯ ಕಾರ್ಯದರ್ಶಿ ದರ್ಜೆಯ ಅಧಿಕಾರಿ ಅಥವಾ ನಿವೃತ್ತ ಅಧಿಕಾರಿಯನ್ನು ಆಯುಕ್ತರನ್ನಾಗಿ ಮಾಡಲಾಗುತ್ತದೆ. ನೇಮಕಗೊಂಡ ಆಯುಕ್ತರು ದೂರುಗಳ ವಿಚಾರಣೆ, ಜಪ್ತಿ, ವಶಪಡಿಸಿಕೊಳ್ಳುವ ಪ್ರಕ್ರಿಯೆ ಸಂಪೂರ್ಣ ಮೇಲ್ವಿಚಾರಣೆ ಮಾಡುವ ಜೊತೆಗೆ ನಿಯಮಿತವಾಗಿ ಸರಕಾರಕ್ಕೆ ವರದಿ ಸಲ್ಲಿಸಲಿದ್ದಾರೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್, ರೋಣ ಶಾಸಕ ಜಿ.ಎಸ್. ಪಾಟೀಲ, ಹೆಸ್ಕಾಂ ಅಧ್ಯಕ್ಷ ಸೈಯ್ಯದ ಅಜ್ಜಂಪೀರ ಖಾದ್ರಿ ಇದ್ದರು.

## ಕ್ರೀಡಾಕೂಟದಲ್ಲಿ ಸಾಧನೆ



■ವಿಜಯಸಾಕ್ಷಿ ಸುದ್ದಿ, ಲಕ್ಷೇಶ್ವರ/ಶಿಗ್ಲಿ

ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಕ್ರೀಡಾಂಗಣದಲ್ಲಿ 2025-26ನೇ ಸಾಲಿನ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ನಡೆದ ಲಕ್ಷೇಶ್ವರ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ತಾಲೂಕಿನ ಶಿಗ್ಲಿ ಗ್ರಾಮದ ಪ.ಮ ಬಳಿಗಾರ ಸರ್ಕಾರಿ ಪಿಯು ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಬಾಲಕರ ವಿಭಾಗದಲ್ಲಿ ಈಶ್ವರ ಹುಲ್ಲೂರ 1500 ಮೀ, 400 ಮೀ ಓಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾನೆ. ವಾಲಿಬಾಲ್ ಮತ್ತು ಕಬಡ್ಡಿಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಬಾಲಕಿಯರ ವಿಭಾಗದಲ್ಲಿ ಕಾಲೇಜಿನ ವಿದ್ಯಾರ್ಥಿನಿ ಲಕ್ಷ್ಮೀ ಬಾಳಿಕಾಯಿ ಗುಂಡು, ಚಕ್ರ ಮತ್ತು ಸರಪಳಿ ಎಸೆತದಲ್ಲಿ ಪ್ರಥಮ ಸ್ಥಾನ ಪಡೆದು ವಯಕ್ತಿಕ ವೀರಾಗ್ರಣಿಯಾಗುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾಳೆ.

ಸತ್ಯಮ್ಮ ಕುರಿ 100ಮೀ ಅಡೆತಡೆ ಓಟ ಪ್ರಥಮ, ರಂಜಿತಾ ಪಲ್ಲೇದ ಎತ್ತರ ಜಿಗಿತ ಪ್ರಥಮ, ಲಲಿತಾ ವಡ್ಡರ ತ್ರಿವಿಧ ಜಿಗಿತ ಪ್ರಥಮ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಸಿಬಿಸಿ, ಪ್ರಾಚಾರ್ಯರು, ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

## ಅನೈತಿಕ ಸಂಬಂಧಕ್ಕೆ ಅಡ್ಡಿ: ಹೆತ್ತ ಮಗುವನ್ನೇ ಕೊಲೆಗೈದ ಪಾಪಿ ತಾಯಿ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಜಿಲ್ಲೆಯ ರಾಣೇಬೆನ್ನೂರು ತಾಲೂಕಿನ ಗುಡ್ಡದ ಆನ್ವೇರಿ ಗ್ರಾಮದಲ್ಲಿ ಅನೈತಿಕ ಸಂಬಂಧಕ್ಕೆ ಅಡ್ಡಿಯಾಗಿದ್ದಾಳೆಂದು ಪ್ರಿಯಕರನೊಂದಿಗೆ ಸೇರಿ ಹೆತ್ತ ಮಗುವನ್ನೇ ಉಸಿರುಗಟ್ಟಿಸಿ ತಾಯಿ ಕೊಲೆ ಮಾಡಿರುವ ಘಟನೆ ಜರುಗಿದೆ.

4 ವರ್ಷದ ಪ್ರಿಯಾಂಕಾ ಮೃತ ಮಗು. ಗಂಗಮ್ಮ ಗುತ್ತಲ (36) ಹಾಗೂ ಅಣ್ಣಪ್ಪ ಮಡಿವಾಳರ (40) ಕೊಲೆ ಮಾಡಿದ ಆರೋಪಿಗಳು. ಆರೋಪಿಗಳಿಬ್ಬರು ಅನೈತಿಕ ಸಂಬಂಧ ಹೊಂದಿದ್ದರು. ಹೀಗಾಗಿ ಆರೋಪಿ ಗಂಗಮ್ಮ ಎರಡು ತಿಂಗಳ ಹಿಂದೆ ತನ್ನ ಪತಿಯನ್ನು ಬಿಟ್ಟು, ಮಗಳನ್ನು ಕರೆದುಕೊಂಡು ಅಣ್ಣಪ್ಪನ ಜೊತೆ ಗುಡ್ಡದ ಆನ್ವೇರಿ ಗ್ರಾಮದಲ್ಲಿ ವಾಸವಾಗಿದ್ದರು.

## ವಾಯ್.ಕೆ. ಪಿಡಗಣ್ಣವರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ನಿವೃತ್ತ ಉಭಯ ಉಪನಿರ್ದೇಶಕರಾದ ಎ.ಎಮ್. ವಡಿಗೇರಿ, ಎಮ್.ಎ. ರಡ್ಡೇರ, ನಿವೃತ್ತ ಪಿಡಬ್ಲ್ಯೂ ಇಂಜಿನಿಯರ್ ವೈ.ಐ. ಸಂಗಮ, ನಿವೃತ್ತ ಶಿಕ್ಷಕರಾದ ಎಸ್.ಎಚ್. ತಳ್ಳಿಹಾಳ ಅವರಿಗೆ ಪ್ರೌಢಶಾಲೆಯಲ್ಲಿ ಕಲಿಸಿದ ಗಣಿತ ಶಿಕ್ಷಕರಾದ ವಾಯ್.ಕೆ. ಪಿಡಗಣ್ಣವರ ಅವರನ್ನು ಶಿಕ್ಷಕ ದಿನಾಚರಣೆ ದಿನದಂದು ಸನ್ಮಾನಿಸಿ ಗೌರವಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವಾಯ್.ಕೆ. ಪಿಡಗಣ್ಣವರ, ನನ್ನ ವೃತ್ತಿ ಬದುಕಿನಲ್ಲಿ ಇಂತಹ ವಿದ್ಯಾರ್ಥಿಗಳಿಗೆ ಪಾಠ ಮಾಡಿ, ಅವರಿಂದು ಉನ್ನತ ಹುದ್ದೆಯಲ್ಲಿರುವುದು ವೈಯುಕ್ತಿಕವಾಗಿ ಸಂತೋಷವಾಗುತ್ತಿದೆ. ವೃತ್ತಿ ಜೀವನದಲ್ಲಿ ಮಾರ್ಗದರ್ಶನ ಮಾಡಿ ಸಹಕರಿಸಿದ ಕನಕದಾಸ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಬಿ.ಎಫ್. ದಂಡಿನ ಮತ್ತು ಪ್ರಾಚಾರ್ಯ ಕೆ.ಬಿ. ತಳಿಗೇರಿ ಅವರನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಶಾಲಾ ಮುಖ್ಯೋಪಾಧ್ಯಾರಾದ ಬಿ.ವಾಯ್. ಡೊಳ್ಳಿನ, ಶಿಕ್ಷಕರಾದ ವಿಶ್ವನಾಥ ಕಮ್ಮಾರ ಉಪಸ್ಥಿತರಿದ್ದರು.

## ರೈತರು ರಾಶಿ ಮಾಡುವ ರೀತಿ ಬಚ್ಚಿಟ್ಟ ಅಕ್ಕಿ ಜಪ್ತಿ!

▶▶ಮೊದಲನೇ ಪುಟದಿಂದ

ಹಾಗೂ ಬಸವಣ್ಣೆಪ್ಪ ಸಂಕನ್ನವರ ಅವ್ರ 32 ಚೀಲ್ ಪಡಿತರ ಅಕ್ಕಿಯನ್ನು ವಶಕ್ಕೆ ಪಡೆಯಲಾಗಿದೆ. ಹಾಗೇ ಮುಂಡರಗಿ ತಾಲೂಕಿನ ಶಿರೋಳ ಗ್ರಾಮದಲ್ಲಿ ಬೂದಪ್ಪ ಕುರಿ ಎನ್ನುವಾತನ ಮನೆಯಲ್ಲಿ 203 ಚೀಲ್ ಅಕ್ಕಿಯನ್ನು ಸಂಗ್ರಹಣೆ ಮಾಡಲಾಗಿತ್ತು. ಮುಂಡರಗಿ ಪೊಲೀಸರು ಹಾಗೂ ಆಹಾರ ಇಲಾಖೆ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ, ವಶಕ್ಕೆ ಪಡೆಯಲಾಗಿದೆ. ಗದಗ ಜಿಲ್ಲೆಯಲ್ಲಿ ಎರಡು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮೂರು ಕಡೆ ದಾಳಿ ಮಾಡಲಾಗಿದ್ದು, ಅಪಾರ ಪ್ರಮಾಣದ ಪಡಿತರ ಅಕ್ಕಿ ವಶಕ್ಕೆ ಪಡೆಯಲಾಗಿದೆ. ಈ ಅಕ್ಕಿಯನ್ನು ಎಲ್ಲಿಗೆ ಸಾಗಿಸಲಾಗುತ್ತಿತ್ತು ಎನ್ನುವ ಬಗ್ಗೆ ತನಿಖೆ ನಡೆಯುತ್ತಿದೆ ಎಂದರು.

ಒಟ್ಟಾರೆ ಸರ್ಕಾರ ಬಡವರು ಹಸಿವಿನಿಂದ ಬಳಲಬಾರದು ಎಂದು ಅನ್ನಭಾಗ್ಯ ಯೋಜನೆ ಜಾರಿ ಮಾಡಿದೆ.. ಆದ್ರೆ ಅಕ್ಕಿ ದಂಧೆ-ಕೋರರು ಇದನ್ನೇ ಲಾಭವನ್ನಾಗಿ ಮಾಡಿಕೊಂಡು, ಬಡವರ ಹೊಟ್ಟೆ ಮೇಲೆ ಹೊಡೆಯುತ್ತಿದ್ದಾರೆ..ಒಟ್ನಲ್ಲಿ ಅಕ್ರಮವಾಗಿ ಸಾಗಿಸಲು ಪ್ಲಾನ್ ಮಾಡಿದ್ದ, ದಂಧೆಕೋರರ ಹೆಡಮುರಿ ಕಟ್ಟುವಲ್ಲಿ ಗದಗ ಪೊಲೀಸರು ಯಶಸ್ವಿಯಾಗಿದ್ದಾರೆ.

## ನೂತನ ಉಪ ರಾಷ್ಟ್ರಪತಿಯಾಗಿ ಸಿ.ಪಿ ರಾಧಕೃಷ್ಣನ್ ಆಯ್ಕೆ: ಕಾಂಗ್ರೆಸ್ ನಿಂದ ಅಭಿನಂದನೆಗಳ ಮಹಾಪೂರ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ನೂತನ ಉಪರಾಷ್ಟ್ರಪತಿಯಾಗಿ ಸಿ.ಪಿ ರಾಧಕೃಷ್ಣನ್ ಆಯ್ಕೆಯಾಗಿದ್ದಾರೆ.

ಜಗದೀಪ್ ಧನ್ಕರ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಉಪರಾಷ್ಟ್ರಪತಿ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಸ್ಪಷ್ಟ ಬಹುಮತ ಪಡೆಯುವ ಮೂಲಕ ಸಿ.ಪಿ ರಾಧಾಕೃಷ್ಣನ್ ಗೆಲುವು ಸಾಧಿಸಿದರು. ರಾಧಾಕೃಷ್ಣನ್ ಅವರು 452 ಮೊದಲ ಪ್ರಾಶಸ್ತ್ಯದ ಮತಗಳನ್ನ ಪಡೆದು ಗೆಲುವು ಸಾಧಿಸಿದ್ರೆ, ಪ್ರತಿಸ್ಪರ್ಧಿ ಸುದರ್ಶನ್ ರೆಡ್ಡಿ 300 ಮತಗಳನ್ನು ಪಡೆದು ಪರಾಭವಗೊಂಡರು.

ನೂತನ ಉಪರಾಷ್ಟ್ರಪತಿಗಳಿಗೆ ಕಾಂಗ್ರೆಸ್ ಕೂಡ ಸಾಮಾಜಿಕ ಜಾಲತಾಣಗಳಲ್ಲಿ ಅಭಿನಂದನೆ ತಿಳಿಸಿದ್ದಾರೆ. ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಕಾಂಗ್ರೆಸ್ ರಾಷ್ಟ್ರೀಯ ಸಂವಹನ ಉಸ್ತುವಾರಿ ಮತ್ತು ರಾಜ್ಯಸಭೆ ಸಂಸದ ಜೈರಾಮ್ ರಮೇಶ್, ಭಾರತದ ನೂತನ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರಿಗೆ ಶುಭಾಶಯಗಳು. ರಾಜ್ಯಸಭೆಯ ಸಭಾಪತಿಗಳಾಗಿ ಅವರು ಭಾರತದ ಮೊಟ್ಟ ಮೊದಲ ಉಪರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಮಾದರಿಯಲ್ಲಿ ಅಧಿಕಾರ ಚಲಾಯಿಸಲಿದ್ದಾರೆ ಎಂಬ ಭರವಸೆ ಇದೆ. ರಾಜ್ಯಸಭೆಯ ಉದ್ಘಾಟನಾ ದಿನದಂದು ಸರ್ವಪಲ್ಲಿ ರಾಧಾಕೃಷ್ಣನ್ ಅವರು ಸಂಸದೀಯ ಪ್ರಜಾಪ್ರಭುತ್ವದ ಅತ್ಯುನ್ನತ ಸಂಪ್ರದಾಯಗಳನ್ನು ಎತ್ತಿಹಿಡಿಯುವುದಾಗಿ ಮತ್ತು ಪ್ರತಿಪಕ್ಷದ ಬಗ್ಗೆ ನ್ಯಾಯಯುತ ಮತ್ತು ನಿಷ್ಪಕ್ಷಪಾತವಾಗಿರುವುದಾಗಿ ಭರವಸೆ ನೀಡಿದ್ದರು" ಎಂದು ಜೈರಾಮ್ ರಮೇಶ್ ಟ್ವೀಟ್ ಮಾಡಿದ್ದಾರೆ.

## ರೋಟರಿ ಗದಗ ಸೆಂಟ್ರಲ್‌ನಿಂದ ಶಿಕ್ಷಕರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ರೋಟರಿ ಗದಗ ಸೆಂಟ್ರಲ್ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ಶಿಕ್ಷಕರಿಗೆ 'ರೋಟರಿ ಅತ್ಯುತ್ತಮ ಶಿಕ್ಷಕ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸೇವಾಲಾಲ ನಗರದ ರೋಟರಿ ಭವನದಲ್ಲಿ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಸಂಸ್ಥೆಯ ಅಧ್ಯಕ್ಷ ಚೇತನ ಅಂಗಡಿ ವಹಿಸಿ ಮಾತನಾಡಿ, ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಶ್ರಮಿಸುವ ಶಿಕ್ಷಕರನ್ನು ನಾವೇ ಗುರುತಿಸಿ ಆಯ್ಕೆ ಮಾಡಿ ಈ ಪ್ರಶಸ್ತಿಯನ್ನು ನೀಡುತ್ತಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಆದರ್ಶ ಶಿಕ್ಷಕರಾದ ಮಂಜುಳಾ ವಿ.ಕಲಹಾಳ, ಬಿ.ಎಸ್. ಹಳ್ಯಾಳ, ಸಿದ್ದಲಿಂಗಪ್ಪಾ ಕೆ.ಹಗರನ್ನವರ, ತ್ರಿವೇಣಿ ಜಿ.ಕಂಬಾಳಿಮಠ, ವಿನಾಯಕ ಆರ್.ಬಂಡಾ ಅವರನ್ನು ಪ್ರಶಸ್ತಿ ಪತ್ರದೊಂದಿಗೆ ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯ ಮೇಲೆ ಅಸಿಸ್ಟಂಟ್ ಗವರ್ನರ್ ವಿ.ಕೆ. ಗುರುಮಠ, ರೋಟರಿ ಲಿಟ್ರಸಿ ಚೇರಮನ್ ಪಿಎಜಿ ಎಸ್.ಆಯ್ ಅಣ್ಣಿಗೇರಿ, ಕಾರ್ಯದರ್ಶಿ ರಾಜಶೇಖರ ಉಮನಾಬಾದಿ, ಕೋಶಾಧಿಕಾರಿ ಡಾ. ಪ್ರಭು ಗಂಜಿಹಾಳ ಉಪಸ್ಥಿತರಿದ್ದರು.

ಮಾಜಿ ಅಸಿಸ್ಟಂಟ್ ಗವರ್ನರ್ ಮಲ್ಲಿಕಾರ್ಜುನ ಐಲಿ ಸ್ವಾಗತಿಸಿದರು. ರಾಜಶೇಖರ ಉಮನಬಾದಿ ನಿರೂಪಿಸಿದರು.ಡಾ. ಪ್ರಭು ಗಂಜಿಹಾಳ ವಂದಿಸಿದರು. ಕಾರ್ಯಕ್ರಮದಲ್ಲಿ ರೋಟರಿ ಗದಗ ಸೆಂಟ್ರಲ್‌ನ ಪದಾಧಿಕಾರಿಗಳು, ಸದಸ್ಯರು ಪಾಲ್ಗೊಂಡಿದ್ದರು.

### ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಮಾಸಿಕ ಸಭೆಯಲ್ಲಿ ಜಿ.ಬಿ. ಮಾಲಗಿತ್ತಿಮಠ

# ಸೈನಿಕ ಭವನ ನಿರ್ಮಾಣ ಶೀಘ್ರದಲ್ಲಿ ಪೂರ್ಣ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನಲ್ಲಿ ನಿರ್ಮಾಣಗೊಳ್ಳುತ್ತಿರುವ ಸೈನಿಕ ಸಮುದಾಯ ಭವನ ಹಾಗೂ ಸೈನಿಕ ತರಬೇತಿ ಕೇಂದ್ರದ ಕಟ್ಟಡವನ್ನು ಶೀಘ್ರದಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದ್ದು, ಇದಕ್ಕೆ ಎಲ್ಲ ಮಾಜಿ ಸೈನಿಕರು, ವೀರನಾರಿಯರು ಸಹಕಾರ ನೀಡಬೇಕೆಂದು ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಜಿ.ಬಿ. ಮಾಲಗಿತ್ತಿಮಠ ಮನವಿ ಮಾಡಿಕೊಂಡರು.

ಅವರು ಸಂಘದ ಕಾರ್ಯಾಲಯದಲ್ಲಿ ಜರುಗಿದ ಮಾಸಿಕ ಸಭೆ, ಮಾಜಿ ಸೈನಿಕರ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ, ಸೇವಾ ನಿವೃತ್ತ ಸೈನಿಕರಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾರಂಭದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 85ಕ್ಕೂ ಹೆಚ್ಚು ಅಂಕಗಳನ್ನು ಪಡೆದುಕೊಂಡ ಮಾಜಿ ಸೈನಿಕರ ಮಕ್ಕಳಾದ ವರ್ಷಿತಾ ಬಳ್ಳಾರಿ, ಹರ್ಷಾ ಮಡಿವಾಳರ, ನಾಗರಾಜ ಸೋಗಿಹಾಳ, ಮೇಘಾ ಹೊಸಮನಿ ಸೈಯದ್‌ಶಫಿ ಹಖ್, ಆಕಾಶ ಬಸವರೆಡ್ಡಿ, ರವೀಂದ್ರನಾಥ ಮಡಿವಾಳರ ಹಾಗೂ ಫ್ರಾನ್ಸ್ ದೇಶದಲ್ಲಿ ಎಂ.ಎಸ್ ಇಂಜಿನಿಯರಿಂಗ್‌ದಲ್ಲಿ ಉನ್ನತ ಸ್ಥಾನ ಪಡೆದು ಅಲ್ಲಿಯೇ ದಂಪತಿ ಸಮೇತ ಸೇವೆ ಸಲ್ಲಿಸುತ್ತಿರುವ ನೀಲಪ್ಪ ಬಿಂಗಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಹಿಮಾಚಲ ಪ್ರದೇಶದ ಮನಾಲಿಯ ಪರ್ವತವನ್ನು 1570 ಅಡಿ ಎತ್ತರದವರೆಗೆ ಯಶಸ್ವಿಯಾಗಿ ಏರಿದ ಗದುಗಿನ ಎನ್.ಸಿ.ಸಿ ವಿದ್ಯಾರ್ಥಿ ಗುರುಪ್ರಸಾದ ಸೊನ್ನದ ಹಾಗೂ ಸೇನೆಯಲ್ಲಿ ಸೇವೆಗೈದು ನಿವೃತ್ತರಾದ ಸಿದ್ದಪ್ಪ ಯಲ್ಲಪ್ಪಗೌಡರ, ಸಿದ್ಧನಗೌಡ ಹಿರೇಗೌಡರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಿರ್ದೇಶಕರಾದ ಎಸ್.ಬಿ. ಸರ್ವಿ, ಬಿ.ವ್ಹಿ. ಅಬ್ಬಿಗೇರಿ, ವ್ಹಿ.ಬಿ. ಬಿಂಗಿ, ಕೆ.ಎಸ್. ಹಿರೇಮಠ, ಬಸನಗೌಡ ಪಾಟೀಲ, ಶಂಕರಗೌಡ ಪಾಟೀಲ, ಸೈಯದ್‌ಮೊಯಿನುಲ್ ಹಖ್, ಯಲ್ಲಪ್ಪ ಮಾದರ, ಎಸ್.ಎನ್. ಮಡಿವಾಳರ, ರಾಮಲಿಂಗಂ, ಎನ್.ಎಚ್. ಕಂಬಳಿ, ಅಲ್ಲಾಸಾಬ ಕೊತಬಾಳ, ಎನ್.ಎಸ್. ಸಂಭಾಪೂರ, ಜಿ.ಬಿ. ಅರವಟಗಿಮಠ, ಈರಣ್ಣ ತಳ್ಳಿಕೇರಿ, ವೀರನಾರಿಯರಾದ ಶಿವಲೀಲಾ ಬಾವಿಕಟ್ಟಿ, ಲಲಿತಾ ಕುರಹಟ್ಟಿ, ಅನಸೂಯಾ ಹಾವಕ್ಕನವರ, ಲಲಿತಾ ಬಳ್ಳಾರಿ, ನೀಲಾ ಸೋಗಿಹಾಳ, ಮೀನಾಕ್ಷಿ ಬದಿ, ರೇಣುಕಾ ಮರಡಿ, ಭಾರತಿ ಬಸವರಡ್ಡಿ, ಗೀತಾ ಹೊಸಮನಿ ಮುಂತಾದವರು ಪಾಲ್ಗೊಂಡಿದ್ದರು.

ಸಂಘದ ಉಪಾಧ್ಯಕ್ಷ ಎಸ್.ಆರ್. ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಸಿ.ಜಿ. ಸೊನ್ನದ ವಂದಿಸಿದರು.

## ಆರೋಗ್ಯವಂತ ಸಮಾಜ ನಿರ್ಮಾಣ ಪ್ರತಿಯೊಬ್ಬರ ಕರ್ತವ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಗ್ರಾಮೀಣ ಭಾಗದ ಜನರು ಬದುಕು ಹಸನಾಗಲು ಆರೋಗ್ಯ ಭಾಗ್ಯ ತುಂಬಾ ಅಗತ್ಯವಿದೆ ಎಂದು ದಿ ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿಯ ಕೆ.ಎಚ್. ಪಾಟೀಲ್ ಆಸ್ಪತ್ರೆ ಹಾಗೂ ರಿಸರ್ಚ್ ಇನ್‌ಸ್ಟಿಟ್ಯೂಟ್‌ನ ಅಧ್ಯಕ್ಷ ಎಸ್.ಆರ್. ನಾಗನೂರ ಹೇಳಿದರು.

ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾ ಭವನದಲ್ಲಿ ದಿ ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿಯ ಕೆ.ಎಚ್. ಪಾಟೀಲ್ ಆಸ್ಪತ್ರೆ, ರಿಸರ್ಚ್ ಇನ್‌ಸ್ಟಿಟ್ಯೂಟ್ ಹಾಗೂ ಸೆರೆಂಟಿಕ್ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ಆರೋಗ್ಯವಂತ ಸಮಾಜ ನಿರ್ಮಾಣ ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದ್ದು, ಗ್ರಾಮೀಣ ಭಾಗದ ಸಾರ್ವಜನಿಕರ ಆರೋಗ್ಯವಂತರಾಗಿದ್ದರೆ ಆರೋಗ್ಯವಂತ ಸಮಾಜ ನಿರ್ಮಿಸಲು ಸಾಧ್ಯವಾಗುತ್ತದೆ. ನಮ್ಮ ಸಂಸ್ಥೆ ಕಳೆದ 31 ವರ್ಷಗಳಿಂದ ಆರೋಗ್ಯ ಸೇವೆ ನೀಡುತ್ತಿದ್ದು, ಈಗ 100 ಹಾಸಿಗೆಗಳ ನಮ್ಮ ಆಸ್ಪತ್ರೆ ಸದಾ ಸೇವೆಯಲ್ಲಿದೆ ಎಂದರು.

ಸೆರೆಂಟಿಕ್ ಸಂಸ್ಥೆಯ ಬಾಳಕೃಷ್ಣ ಮಾತನಾಡಿ, ಸುಂದರ ಸಮಾಜ ನಿರ್ಮಿಸಲು ಪ್ರತಿಯೊಬ್ಬರ ಆರೋಗ್ಯ ಬಹಳ ಮುಖ್ಯವಾಗಿದೆ. ಇಂದು ನಮ್ಮಲ್ಲಿ ಎಲ್ಲವೂ ಇದೆ. ಆದರೆ, ಆರೋಗ್ಯ ನಿತ್ಯ ಹದಗೆಡುತ್ತಿದ್ದು, ಆರೋಗ್ಯ ಕಾಳಜಿ ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ಈ ಶಿಬಿರದಲ್ಲಿ ನುರಿತ ತಜ್ಞ ವೈದ್ಯರು ಚಿಕಿತ್ಸೆ, ಔಷಧೋಪಚಾರ ನೀಡಿದ್ದು ಸಾಕಷ್ಟು ಬಡ ಕುಟುಂಬಗಳಿಗೆ ಸಹಕಾರಿಯಾಗಿದೆ. ಇದರಿಂದ ಗ್ರಾಮೀಣ ಭಾಗದ ಜನರ ಆರ್ಥಿಕ ಹೊರೆಯನ್ನು ಇಳಿಸಲು ಸಹಕಾರಿಯಾಗಿದೆ ಎಂದರು.

ಅಧ್ಯಕ್ಷತೆಯನ್ನು ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ ವಹಿಸಿದ್ದರು. ಡಾ. ಎಸ್.ಆರ್. ನಾಗನೂರ, ಬಸವರಾಜ ಬೊಮ್ಮನಹಳ್ಳಿ, ಪ್ರೀತ್ ಖೋನಾ, ಪ್ರವೀಣ ತುಪ್ಪದ, ಡಾ. ವೇಮನ ಸಾಹುಕಾರ, ವಿಜೇಶ ಮಾನಕರ, ಎಂ.ಡಿ. ಬಟ್ಟೂರ, ಎಸ್.ಎಂ. ನೀಲಗುಂದ, ಐ.ಎಂ. ಶೇಖ್, ಕೆ.ಎಲ್. ಕರಿಗೌಡರ, ಎಸ್.ಸಿ. ಬಡ್ನಿ, ನಾಗರಾಜ ದೇಶಪಾಂಡೆ, ಬಸವರಾಜ ಬಡ್ನಿ ಇದ್ದರು.

# ಇಂದು ವಾರ್ಷಿಕ ಸಭೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹರಪನಹಳ್ಳಿ ಪಟ್ಟಣದ ಐಬಿ ವೃತ್ತದಲ್ಲಿರುವ ವಿಶ್ವಬಂಧು ಸೌಹಾರ್ದ ಸಹಕಾರಿ ಸಂಘದ 7ನೇ ವಾರ್ಷಿಕ ಮಹಜನ ಸಭೆಯಯನ್ನು ತರಳಬಾಳು ಕಲ್ಯಾಣ ಮಂಟಪದಲ್ಲಿ ಇದೇ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಕರೆಯಲಾಗಿದೆ.

ಸದಸ್ಯರು ಸಕಾಲಕ್ಕೆ ಆಗಮಿಸಿ ಸಭೆ ಯಶಸ್ವಿ ಗೊಳಿಸಲು ಅಧ್ಯಕ್ಷ ಪಿ ಕೆಂಚನ ಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ಶಂಕರ ಮಠದಲ್ಲಿ ಅದ್ವೈತಾನುಭವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸಂಭಾಪುರ ರಸ್ತೆಯಲ್ಲಿರುವ ಶ್ರೀ ಶಂಕರ ಮಠದಲ್ಲಿ ಸೆ. 11ರ ಸಾಯಂಕಾಲ 6 ಗಂಟೆಗೆ ಅದ್ವೈತ ಪ್ರಸಾರ ಪರಿಷತ್ ವತಿಯಿಂದ ಅದ್ವೈತಾನುಭವ–41 ಜರುಗಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ವೇ.ಮೂ. ರತ್ನಾಕರಭಟ್ಟ ಜೋಶಿ ವಹಿಸಲಿದ್ದು, ಖ್ಯಾತ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತಗಾರ ಪ್ರಸಾದ ಸುತಾರ ಇವರಿಂದ ಗಾಯನ ಕಾರ್ಯಕ್ರಮ ನಡೆಯಲಿದೆ.

ತಬಲಾ ಸಾಥ್ ಗುರುನಾಥ ಸುತಾರ ಹಾಗೂ ಸಂವಾದಿನಿ ರಾಮು ಕೋಡೆಕಲ್ಲ ನೀಡಲಿದ್ದಾರೆ. ಶ್ರೀ ಶಂಕರರ ಅನುಯಾಯಿಗಳು, ಸಂಗೀತಾಸಕ್ತರು ಹಾಗೂ ಆಸಕ್ತ ಆಸ್ತಿಕರು ಕಾರ್ಯಕ್ರಮದಲ್ಲಿ ಭಾಗವಹಿಸಲು ಅದ್ವೈತ ಪ್ರಸಾರ ಪರಿಷತ್‌ನ ಅಧ್ಯಕ್ಷರಾದ ರಾಮಚಂದ್ರ ಮೋನೆ, ಕಾರ್ಯದರ್ಶಿಗಳಾದ ವೇ.ಮೂ ಗಣೇಶಭಟ್ಟ ಪುರಾಣಿಕ ಹಾಗೂ ಸರ್ವ ಸದಸ್ಯರು ವಿನಂತಿಸಿದ್ದಾರೆ.

### ಜಿಲ್ಲಾ ಮಟ್ಟದ ಮ್ಯಾರಾಥಾನ್ ಜಾಗೃತಿ ಕಾರ್ಯಕ್ರಮಕ್ಕೆ ಡಾ. ಎಸ್.ಎಸ್. ನೀಲಗುಂಡ ಚಾಲನೆ

# ಜಿಲ್ಲೆಯಲ್ಲಿ ಹೆಚ್.ಐ.ವಿ ಪ್ರಮಾಣ ಇಳಿಮುಖ

■ವಿಜಯಸಾಕ್ಷಿ ಸುದ್ದಿ, ಗದಗ

ಹೆಚ್.ಐ.ವಿ/ಏಡ್ಸ್ ತಡೆಗಟ್ಟಲು ತೀವ್ರತರವಾದ ಐ.ಇ.ಸಿ ಪ್ರಚಾರಾಂದೋಲನ–2025ರ ಅಂಗವಾಗಿ ರೆಡ್ ರಿಬ್ಬನ್ ಕಾಲೇಜು ವಿದ್ಯಾರ್ಥಿಗಳಿಗಾಗಿ 5 ಕಿ.ಮೀ. ಮ್ಯಾರಾಥಾನ್ ಸ್ಪರ್ಧೆಯನ್ನು ಆಯೋಜಿಸಿದೆ. ಜಿಲ್ಲೆಯಲ್ಲಿ ಹೆಚ್.ಐ.ವಿ ಪ್ರಮಾಣ ಇಳಿಮುಖವಾಗಿದ್ದು, ವಿದ್ಯಾರ್ಥಿಗಳು ಹೆಚ್.ಐ.ವಿ ಏಡ್ಸ್ ಬಗ್ಗೆ ತಿಳಿದುಕೊಂಡು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ ಹೇಳಿದರು.




ನಗರದ ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಶನ್ ಸೊಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಐ.ಎಮ್.ಎ, ರೋಟರಿ ಸೆಂಟ್ರಲ್ ಗದಗ, ಲಾಯನ್ಸ್ ಕ್ಲಬ್ ಗದಗ–ಬೆಟಗೇರಿ, ಶಿಕ್ಷಣ ಇಲಾಖೆ, ಕ್ರೀಡಾ ಇಲಾಖೆ, ರಕ್ಷಣೆ ಸಂಸ್ಥೆ, ಸೃಷ್ಟಿ ಸಂಕುಲ ಸಂಸ್ಥೆ, ಚೈತನ್ಯ ಸಂಸ್ಥೆ, ನವಚೇತನ ಸಂಸ್ಥೆ, ಗದಗ ಜಿಲ್ಲೆಯ ಎನ್.ಎಸ್.ಎಸ್ ಘಟಕಗಳು ಹಾಗೂ ರೆಡ್ ರಿಬ್ಬನ್ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಮ್ಯಾರಾಥಾನ್ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಡಾ. ಆರ್.ಎನ್. ಗೋಡಬೇಲೆ ಮಾತನಾಡಿ, ವಿದ್ಯಾರ್ಥಿಗಳು ಯೌವನದಲ್ಲಿ ತಮ್ಮ ಜೀವನವನ್ನು ಜೋಪಾನ ಮಾಡಿಕೊಂಡು ಆರೋಗ್ಯಕರ ನಡುವಳಿಕೆಗಳನ್ನು ರೂಪಿಸಿಕೊಳ್ಳಲು ಕರೆ ನೀಡಿದರು.

ಡಾ. ಅರುಂಧತಿ ಕುಲಕರ್ಣಿ ಮಾತನಾಡಿ, ಹೆಚ್.ಐ.ವಿ ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ಜಿಲ್ಲೆಯ ಯುವ ಸಮುದಾಯ ಜಾಗೃತಿಯನ್ನು ಮೂಡಿಸಿ ಜಿಲ್ಲೆಯಲ್ಲಿ ಸೋಂಕಿನ ಪ್ರಮಾಣವನ್ನು ಸೊನ್ನೆಗೆ ತರಲು ಶ್ರಮಿಸಬೇಕೆಂದು ತಿಳಿಸಿದರು.

ಮ್ಯಾರಾಥಾನ್ ಸ್ಪರ್ಧೆಯಲ್ಲಿ ಪುರುಷರಲ್ಲಿ ಪ್ರಥಮ ಸ್ಥಾನವನ್ನು ರಮೇಶ ಸಿಂಗಡಾನಕೇರಿ, ದ್ವಿತೀಯ ಸ್ಥಾನವನ್ನು ದೇವರಾಜ ದೊಡಮನಿ, ತೃತೀಯ ಸ್ಥಾನವನ್ನು ಅಶೋಕ ವಡ್ಡರ ಪಡೆದುಕೊಂಡರು. ವಿದ್ಯಾರ್ಥಿನಿಯರ ವಿಭಾಗದಲ್ಲಿ ಪ್ರಥಮ ಸ್ಥಾನವನ್ನು ದ್ರಾಕ್ಷಾಯಿಣಿ ಕರ್ಣಿ, ದ್ವಿತೀಯ ಸ್ಥಾನವನ್ನು ಪ್ರೀತಿ ಬ.ಮುಗಳಿ, ತೃತೀಯ ಸ್ಥಾನವನ್ನು ಅಕ್ಷತಾ ಕಲಗುಡಿ ಪಡೆದುಕೊಂಡರು.

> ಹೆಚ್.ಐ.ವಿ ಏಡ್ಸ್ ಮಾರಣಾಂತಿಕ ಖಾಯಿಲೆಯಾಗಿದ್ದು, ಇದನ್ನು ತಡೆಗಟ್ಟಲು ಯುವಜನರಲ್ಲಿ ಅರಿವು ಮತ್ತು ಜಾಗೃತಿ ಮೂಡಿಸುವ ಸಲುವಾಗಿ ಇಲಾಖೆ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಯೋಗದಲ್ಲಿ ಮ್ಯಾರಾಥಾನ್ ಸ್ಪರ್ಧೆ ಆಯೋಜಿಸಲಾಗಿದೆ.
> – ಡಾ. ಅರುಂಧತಿ ಕುಲಕರ್ಣಿ.

ಕ್ರೀಡಾ ಇಲಾಖೆಯ ತರಬೇತುದಾರರಾದ ಮಂಜುನಾಥ ಬಾಗಡೆ, ವಿದ್ಯಾ ಕುಲಕರ್ಣಿ, ಗದಗ ತಾಲೂಕಿನ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಪದಾಧಿಕಾರಿಗಳು, ಜಿಲ್ಲೆಯ ರೆಡ್ ರಿಬ್ಬನ್ ಹಾಗೂ ಎನ್.ಎಸ್.ಎಸ್ ಅಧಿಕಾರಿಗಳು, ಆರೋಗ್ಯ ಇಲಾಖೆಯ ರೂಪಸೇನ್ ಚವ್ಹಾಣ, ಸಿದ್ದಪ್ಪ ಲಿಂಗದಾಳ, ಬಸವರಾಜ ಹಿರೇಹಾಳ, ಗುರುರಾಜ ಕೋಟ್ಯಾಳ, ಗಣೇಶ ಬಾಗಡೆ, ಪ್ರವೀಣ ರಾಮಗಿರಿ, ಜಿಲ್ಲೆಯ ಎಲ್ಲ ಐಸಿಟಿಸಿ, ಎ.ಆರ್.ಟಿ ಡ್ಯಾಪ್ಕೂ ಸಿಬ್ಬಂದಿ, ಆರೋಗ್ಯ, ಶಿಕ್ಷಣ ಇಲಾಖೆಯ ಸಿಬ್ಬಂದಿ, ರಕ್ಷಣೆ ಸಂಸ್ಥೆಯ ಹಜರತ್‌ಬಿ ಮತ್ತು ಸಿಬ್ಬಂದಿ, ಚೈತನ್ಯ ಸಂಸ್ಥೆಯ ಸುನೀಲ್ ಮತ್ತು ಸಿಬ್ಬಂದಿ, ನವಚೇತನ ಸಂಸ್ಥೆಯ ಭಾರತಿ ಹಾಗೂ ಎಲ್ಲ ಸಿಬ್ಬಂದಿಗಳು ಹಾಜರಿದ್ದರು.

ಜೈ ಭೀಮ ಗೀಗೀ ಜಾನಪದ ಕಲಾ ತಂಡ ನೀಲಗುಂದ ಇವರು ಜನಪದ ಗೀತೆಗಳ ಮೂಲಕ ಜಾಗೃತಿ ಮೂಡಿಸಿದರು. ಬಸವರಾಜ ಲಾಳಗಟ್ಟಿ ಸ್ವಾಗತಿಸಿದರು. ರಾಜೇಂದ್ರ ಗಡಾದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ನಾಮನಿರ್ದೇಶಿತ ಸದಸ್ಯರ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘ ಮತ್ತು ನೌಕರರ ಸಂಘಟನೆಗಳ ಸಹಯೋಗದಲ್ಲಿ ಗದಗನಲ್ಲಿ ನಡೆದ ನೂತನ ಜಿಲ್ಲಾಧ್ಯಕ್ಷರುಗಳು ಹಾಗೂ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಾಗೂ ನೌಕರ ಜನಸ್ನೇಹಿ ಕಾರ್ಯಾಗಾರದಲ್ಲಿ ಲಕ್ಷ್ಮೇಶ್ವರ ತಾಲೂಕಿನ ಶಿಕ್ಷಕರಾದ ಎಂ.ಎಸ್. ಹಿರೇಮಠ, ಎಲ್. ಎನ್. ನಂದೆಣ್ಣವರರನ್ನು ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ನಾಮನಿರ್ದೇಶಿತ ಸದಸ್ಯರಾಗಿ ನೇಮಕ ಮಾಡಲಾಯಿತು.

ಈ ವೇಳೆ ಮಣಕವಾಡ ಶ್ರೀಗಳು, ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ, ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ತಾಲೂಕಾ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ, ಕಾರ್ಯದರ್ಶಿ ಎಂ.ಎ. ನದಾಫ್, ಖಜಾಂಚಿ ಎಂ.ಡಿ. ವಾರದ, ಡಿ.ಎಚ್. ಪಾಟೀಲ, ಹೊನ್ನಪ್ಪ ಸಂಜೀವಣ್ಣವರ, ಎಸ್.ಎಚ್. ಉಮಚಗಿ ಮುಂತಾದವರಿದ್ದರು.

# ಹಿಂದೂ ಎನ್ನುವವರು ಮೊದಲಿಗೆ ಅಂತರ್ಜಾತಿ ವಿವಾಹ ಮಾಡಿಸಲಿ: ಸಂತೋಷ್ ಲಾಡ್

■ವಿಜಯಸಾಕ್ಷಿ ಸುದ್ದಿ, ಕೋಲಾರ

ಹಿಂದೂ ಎನ್ನುವವರು ಮೊದಲಿಗೆ ಅಂತರ್ಜಾತಿ ವಿವಾಹ ಮಾಡಿಸಿ ಮಾದರಿ ಆಗಲಿ ಎಂದು ಸಚಿವ ಸಂತೋಷ್ ಲಾಡ್ ಸವಾಲ್ ಹಾಕಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಹಿಂದೂ ಮುಸ್ಲಿಂ ಗಲಾಟೆ ಬಿಟ್ರೆ ಬಿಜೆಪಿ ಏನೂ ಮಾಡುತ್ತಿಲ್ಲ. ಕಲ್ಲು ತೂರಾಟ ಮಾಡಿದವರಿಗೆ ಕಾನೂನು ಪ್ರಕಾರ ಶಿಕ್ಷೆಯಾಗಬೇಕು. ಹಿಂದೂ ಎನ್ನುವವರು ಮೊದಲಿಗೆ ಅಂತರ್ಜಾತಿ ವಿವಾಹ ಮಾಡಿಸಲಿ, ಹಿಂದೂ ಮಾತ್ರ ಎನ್ನುವವರು ಹೀಗೆ ಮಾಡಿ. ಅವರ ಆಸ್ತಿಗಳನ್ನ ಬಡವರಿಗೆ ಕೊಡಿ. ನಾವೆಲ್ಲಾ ಹಿಂದು ನಾವೆಲ್ಲಾ ಒಂದು ಎನ್ನುವವರು ಮೊದಲು ಸಣ್ಣ ಜಾತಿಗಳವರೊಂದಿಗೆ ಮದುವೆ ಮಾಡಿಸಿ ಮಾದರಿಯಾಗಲಿ ಎಂದು ಸವಾಲೆಸೆದರು.

ಬಿಜೆಪಿ ನಾಯಕರ ಮಕ್ಕಳು ಯಾವ ಪ್ರತಿಭಟನೆಗೆ, ಯಾವ ಹೋರಾಟಕ್ಕೆ ಬಂದಿದ್ದಾರೆ? ಬರಲ್ಲ, ಅಲ್ಲಿ ಹೋರಾಟ ಮಾಡೋದು, ಗಾಯಗಳಾಗೋದು ಎಲ್ಲವೂ ಬಡವರ ಮಕ್ಕಳಿಗೆ. ಇನ್ನೂ ಬಿಜೆಪಿಯವರು ಏನು ಮಾಡಿದ್ದಾರೆ? ಶಕ್ತಿ ಪೀಠಗಳು ಹೆಚ್ಚಾಗಿ ಮಾಡಿರುವುದು ಕಾಂಗ್ರೆಸ್‌ನವರು ಎಂದರು. ಇನ್ನೂ ಭದ್ರಾವತಿ ಶಾಸಕ ಸಂಗಮೇಶ್ ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟುತ್ತೇನೆ ಎಂಬ ಹೇಳಿಕೆ ಬಗ್ಗೆ ಮಾತನಾಡಿ, ದೇವೇಗೌಡ್ರು ಈ ಹಿಂದೆ ನಾನು ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟಬೇಕು ಎಂದಿದ್ದರು. ಅವರ ಬಗ್ಗೆ ನನಗೆ ಗೌರವ ಇದೆ. ಆದ್ರೆ ನಮ್ಮ ಶಾಸಕರು ಮಾತ್ರ ಹಾಗೆ ಮಾತನಾಡಬಾರದ? ನಾವು ಮಾತನಾಡಿದ್ರೆ ಓಲೈಕೆನಾ ಎಂದು ಪ್ರಶ್ನಿಸಿದರು.

### ಗದಗ ಜಿಲ್ಲಾ ಸಾಂಸ್ಕೃತಿಕ ಸಂಘಟನೆಗಳು, ಕಲಾವಿದರಿಂದ ಸಿಎಂಗೆ ಮನವಿ

# ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ಕಲೆ, ಸಂಸ್ಕೃತಿ, ಸಾಹಿತ್ಯ, ಇತಿಹಾಸ ಮುಂತಾದ ಪರಂಪರೆಗಳನ್ನು ಉಳಿಸಿ, ಬೆಳೆಸುವುದರೊಂದಿಗೆ, ವಿವಿಧ ಕಲೆಗಳ ಮೂಲಕ ಸಮಾಜಕ್ಕೆ ಮನರಂಜನೆಯೊಂದಿಗೆ ಅವರಿಗೆ ಮೌಲಿಕ ಹಾಗೂ ಆದರ್ಶದ ವಿಚಾರಗಳನ್ನು ತಿಳಿಸುತ್ತ, ಸಮಾಜದಲ್ಲಿ ಶಾಂತಿ, ನೆಮ್ಮದಿಯ ವಾತಾವರಣ ನಿರ್ಮಿಸುವದುರೊಂದಿಗೆ ಸಾತ್ವಿಕ ಸಮಾಜದೆಡೆಗೆ ಕೊಂಡೊಯ್ಯುವ ನಿಟ್ಟಿನಲ್ಲಿ ಕಲಾವಿದರು ಹಾಗೂ ಸಾಂಸ್ಕೃತಿಕ ಸಂಘಟನೆಗಳಿಗಳು ಕೆಲಸ ಮಾಡುತ್ತಿವೆ. ಇವರಿಗೆ ಸರ್ಕಾರವು ಜಾರಿಗೊಳಿಸಿದ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನವಾಗಬೇಕು ಎಂದು ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ಶಂಕ್ರಣ್ಣ ಸಂಕಣ್ಣವರ ಸರ್ಕಾರಕ್ಕೆ ಮನವಿ ಮಾಡಿಕೊಂಡರು.



ಗದಗ ಜಿಲ್ಲೆಯ ಸಾಂಸ್ಕೃತಿಕ ಸಂಘಟನೆಗಳು ಹಾಗೂ ಜಿಲ್ಲೆಯ ಸಮಸ್ತ ಕಲಾವಿದರ ವತಿಯಿಂದ ಬುಧವಾರ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಯೋಜನೆಗಳ ಸಮರ್ಪಕ ಅನುಷ್ಠಾನ ಮತ್ತು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಅವರಿಗೆ ಮನವಿ ಅರ್ಪಿಸಿ ಮಾತನಾಡಿದರು.

> ಹವ್ಯಾಸಿ ರಂಗಕರ್ಮಿ ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಅಧ್ಯಕ್ಷ ಮೌನೇಶ ಚಿ. ಬಡಿಗೇರ(ನರೇಗಲ್ಲ) ಮಾತನಾಡಿ, ಜೀವನಪೂರ್ತಿ ಕಲಾಸೇವೆಗೈದ ಕಲಾವಿದರಿಗೆ ಸದ್ಯ ನೀಡುತ್ತಿರುವ ಮಾಸಾಶನವನ್ನು 5 ಸಾವಿರ ರೂಗಳಿಗೆ ಹೆಚ್ಚಿಸಬೇಕು. ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಉತ್ತೇಜಿಸಲು ಪ್ರತಿವರ್ಷ ತಪ್ಪದೇ ಧನ ಸಹಾಯ ಯೋಜನೆ ಜಾರಿ ಮಾಡಬೇಕು. ಬಾಕಿ ಇರುವ ಎಲ್ಲ ಕಲಾವಿದರ ಸಂಭಾವನೆಯನ್ನು ಕೂಡಲೇ ಬಿಡುಗಡೆಗೊಳಿಸಲು ಆದೇಶಿಸಬೇಕು. ನಾಟಕೋತ್ಸವ, ಕವಿಗೋಷ್ಠಿ, ವಿಚಾರ ಸಂಕಿರಣ ಮುಂತಾದ ಕಾರ್ಯಕ್ರಮಗಳಿಗೆ ಅನುದಾನ ಒದಗಿಸಬೇಕು ಇವೇ ಮುಂತಾದ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ಹಿರಿಯ ಕಲಾವಿದರಾದ ವಿರೂಪಾಕ್ಷಪ್ಪ ಕ್ಷತ್ರಿಯ, ಐ.ಕೆ. ಕಮ್ಮಾರ, ಈರಣ್ಣ ಅಂಗಡಿ, ಸೋಮು ಚಿಕ್ಕಮಠ (ನಟರಂಗ), ಶಿವು ಡಿ.ಭಜಂತ್ರಿ, ಬಸವರಾಜ ಈರಣ್ಣವರ, ಸೂರಜ್ ಮಯೇಕರ್, ದ್ಯಾಮಣ್ಣ ಬಡಿಗೇರ, ಸುಭಾಷ ಮಳಗಿ, ಅಶೋಕ ಸುತಾರ, ರಾಜು ಪೇಂಟರ್, ಆರ್.ಆಯ್. ಅಗಸರ, ರವಿಕುಮಾರ ರಂಗಪ್ಪ ದ್ಯಾವಣಸಿ, ಪ್ರಕಾಶ ಕ.ಬಂದೂನವರ, ಯಲ್ಲಪ್ಪ ಚಂದಣ್ಣವರ, ಪೂಜಾ ಬೇವೂರ, ಲಕ್ಷ್ಮೀ ಮಡಿವಾಳರ, ಜಿ.ಸಾವಿತ್ರಿ, ಡಾ. ಗೋವಿಂದಪ್ಪ ವೇಶಗಾರ, ಆನಂದಪ್ಪ ಜಾಲಿಹಾಳ, ಮುತ್ತು ಕಲ್ಲಪ್ಪ ಕುರಿ, ಖಾಜೇಸಾಬ ಬೂದಿಹಾಳ ಸೇರಿದಂತೆ ಜಿಲ್ಲೆಯ ಸಾಂಸ್ಕೃತಿಕ ಸಂಘಟನೆಗಳ ಮುಖ್ಯಸ್ಥರು ಹಾಗೂ ಕಲಾವಿದರು ಪಾಲ್ಗೊಂಡಿದ್ದರು.



ಗದಗ ನಗರದ ಶಿಕ್ಷಕಿ ರಾಜೇಶ್ವರಿ ಎ.ಹಿರೇಮಠ ಅವರಿಗೆ ಧಾರವಾಡದ ಚೇತನ ಫೌಂಡೇಶನ್, ಧಾರವಾಡದ ಅಪ್ಪಾ ದೇಶ ಫೌಂಡೇಶನ್, ಗದುಗಿನ ಅಶ್ವಿನಿ ಪ್ರಕಾಶನ, ಕಾವ್ಯಶ್ರೀ ಚಾರಿಟೇಬಲ್ ಟ್ರಸ್ಟ್, ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ, ವಿಶ್ವಾಸ ಫೌಂಡೇಶನ್ ವತಿಯಿಂದ 'ಗದಗ ನುಡಿ ಸಡಗರ' ಕಾರ್ಯಕ್ರಮದಲ್ಲಿ 'ಆದರ್ಶ ಶಿಕ್ಷಕಿ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಗದಗ ಜಿಲ್ಲಾ ಚೇಂಬರ್‌ನಿಂದ ಸಚಿವರಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕೇಂದ್ರದಲ್ಲಿ ಕಾರ್ಯ ಮತ್ತು ಪಾಲನಾ ವೃತ್ತ ಕಛೇರಿಯ ನೂತನ ಕಟ್ಟಡದ ಅಡಿಗಲ್ಲು ಸಮಾರಂಭಕ್ಕೆ ಆಗಮಿಸಿದ್ದ ಇಂಧನ ಸಚಿವ ಕೆ.ಜೆ. ಜಾರ್ಜ್ ಹಾಗೂ ಇದಕ್ಕಾಗಿ ಶ್ರಮಿಸಿದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ, ಸಿದ್ದನಗೌಡ ಎಸ್.ಪಾಟೀಲ ಹಾಗೂ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಸಂಸ್ಥೆಯ ವತಿಯಿಂದ ಬೇಡಿಕೆಗಳ ಮನವಿ ಅರ್ಪಿಸಿದರು.



ಗದಗ ಜಿಲ್ಲೆಯಲ್ಲಿ ಲೇಔಟ್‌ಗಳಲ್ಲಿ ಯು.ಜಿ. ಕೇಬಲ್ ಅಳವಡಿಸಲಾಗಿದೆ. ಏನಾದರೂ ತೊಂದರೆಗಳು ಬಂದಲ್ಲಿ, ತೊಂದರೆಗಳನ್ನು ಕಂಡು ಹಿಡಿಯಲು ಯಾವುದೇ ಉಪಕರಣಗಳು ಇಲ್ಲಿಯವರೆಗೂ ಇಲಾಖೆಯಲ್ಲಿ ಲಭ್ಯವಿಲ್ಲ.

ಇದರಿಂದ ಲೇಔಟ್ ಗ್ರಾಹಕರಿಗೆ ಹಾಗೂ ಕೆ.ಎಚ್.ಬಿ ಗ್ರಾಹಕರಿಗೆ ವಿದ್ಯುತ್ ನೀಡಲು ತೊಂದರೆಯಾಗಿದೆ. ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆಯಲು ಎಲ್ಲಾ ರೀತಿಯ ಗ್ರಾಹಕರಿಗೆ ಯಾವುದೇ ಓಸಿ/ಸಿಸಿ ಇತರೆ ದಾಖಲೆಗಳಿಂದ ವಿದ್ಯುತ್ ಪೂರೈಕೆಗೆ ವಿನಾಯತಿ ನೀಡಬೇಕು, ಗ್ರಾಹಕರಿಗೆ ಹೊರೆಯಾಗದಂತೆ ಸ್ಮಾರ್ಟ್ ಮೀಟರ್ ದರವನ್ನು ನಿಗದಿಪಡಿಸಬೇಕೆಂದು ಕೋರಿದರು.

ಸಂಸ್ಥೆಯ ಮನವಿಗೆ ಸಚಿವರು ಸ್ಪಂದಿಸುವ ಭರವಸೆ ನೀಡಿದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ರವೀಂದ್ರನಾಥ ದೊಡ್ಡಮೇಟಿ ಮಾಹಿತಿ

# ನೂತನ ಕಟ್ಟಡ ಉದ್ಘಾಟನೆ ನಾಳೆ




■ವಿಜಯಸಾಕ್ಷಿ ಸುದ್ದಿ, ಗದಗ

ಹಾಲಕೆರೆ ಅನ್ನದಾನೇಶ್ವರ ಮಹಾಸಂಸ್ಥಾನಮಠದ ಮುಪ್ಪಿನ ಬಸವಲಿಂಗ ಶ್ರೀಗಳ ಸಂಕಲ್ಪದಂತೆ ನಗರದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಅನ್ನದಾನೇಶ್ವರ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಆನಂದಾಶ್ರಮ ನೂತನ ಕಟ್ಟಡ ಉದ್ಘಾಟನಾ ಸಮಾರಂಭವನ್ನು ಸೆ. 12ರಂದು ಹಮ್ಮಿಕೊಳ್ಳಲಾಗಿದೆ ಎಂದು ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಬುಧವಾರ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುತ್ತೂರು ಕ್ಷೇತ್ರದ ವೀರಸಿಂಹಾಸನ ಮಹಾಸಂಸ್ಥಾನಮಠದ ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ನೂತನ ಮಹಾವಿದ್ಯಾಲಯವನ್ನು ಉದ್ಘಾಟಿಸುವರು. ಒಳಬಳ್ಳಾರಿಯ ಸುವರ್ಣಗಿರಿ ವಿರಕ್ತಮಠದ ಸಿದ್ಧಲಿಂಗ ಸ್ವಾಮೀಜಿ ಆನಂದಾಶ್ರಮ ಕಟ್ಟಡವನ್ನು ಉದ್ಘಾಟಿಸುವರು. ಮುಂಡರಗಿ ಅನ್ನದಾನೇಶ್ವರ ಮಠದ ನಾಡೋಜ ಜಗದ್ಗುರು ಡಾ. ಅನ್ನದಾನ ಸ್ವಾಮೀಜಿ ಸಾನ್ನಿಧ್ಯ ವಹಿಸುವರು ಎಂದು ಹೇಳಿದರು.

ನಂದವಾಡಗಿ ಹಿರೇಮಠದ ಮಹಾಂತ ಶಿವಾಚಾರ್ಯ ಸ್ವಾಮೀಜಿ, ಸಂತೆಕೆಲೂರ ಘನಮಠೇಶ್ವರಮಠದ ಗುರುಬಸವ ಸ್ವಾಮೀಜಿ, ಹಾವೇರಿ ಹುಕ್ಕೇರಿಮಠದ ಸದಾಶಿವ ಸ್ವಾಮೀಜಿ, ಮಣಕವಾಡದ ಅಭಿನವ ಮೃತ್ಯುಂಜಯ ಸ್ವಾಮೀಜಿ, ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರ ನೇತೃತ್ವದಲ್ಲಿ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಕಾರ್ಯಕ್ರಮವನ್ನು ಉದ್ಘಾಟಿಸುವರು. ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಗೋವಿಂದ ಕಾರಜೋಳ, ಶಾಸಕರಾದ ಸಿ.ಸಿ. ಪಾಟೀಲ, ಹಂಪನಗೌಡ ಬಾದರ್ಲಿ, ಮಾಜಿ ಶಾಸಕರಾದ ವೀರಣ್ಣ ಚರಂತಿಮಠ, ಅಮರೇಗೌಡ ಬಯ್ಯಾಪೂರ, ಡಿ.ಆರ್. ಪಾಟೀಲ ಪಾಲ್ಗೊಳ್ಳುವರು ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಆಡಳಿತಾಧಿಕಾರಿ ಎನ್.ಆರ್. ಗೌಡರ, ನಿಂಗರಾಜ ಬೇವಿನಕಟ್ಟಿ, ಜೆ.ಎನ್. ಪಾಟೀಲ, ಬಿ.ಎನ್. ಪಾಟೀಲ ಹಾಗೂ ವಿದ್ಯಾಸಾಗರ ಇದ್ದರು.

> ಪ್ರಾಚಾರ್ಯ ವೈ.ಸಿ. ಪಾಟೀಲ ಮಾತನಾಡಿ, ಬಡ ವಿದ್ಯಾರ್ಥಿಗಳ ವಸತಿ ಶಿಕ್ಷಣಕ್ಕಾಗಿ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯಿಂದ ಉತ್ತರ ಕರ್ನಾಟಕ ಸೇರಿ ಕಲ್ಯಾಣ ಕರ್ನಾಟಕದ ಪ್ರಮುಖ ಜಿಲ್ಲೆಗಳಲ್ಲಿ ಆರಂಭಗೊಂಡಿರುವ ಶಿಕ್ಷಣ ಸಂಸ್ಥೆಗಳಲ್ಲಿ 10 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಜ್ಞಾನಾರ್ಜನೆ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಜ್ಞಾನ ದಾಸೋಹದ ಜೊತೆಗೆ ಉಚಿತವಾಗಿ ಅನ್ನದಾಸೋಹವನ್ನು ನಡೆಸಿಕೊಂಡು ಬರಲಾಗುತ್ತಿದೆ ಎಂದು ಹೇಳಿದರು.

# ಡಿಜಿಟಲ್ ಅರೆಸ್ಟ್: ಔರಾದ್ ಮಾಜಿ ಶಾಸಕ ಗುಂಡಪ್ಪ ವಕೀಲ್‌ಗೆ ರೂ. 31 ಲಕ್ಷ ವಂಚನೆ

■ವಿಜಯಸಾಕ್ಷಿ ಸುದ್ದಿ, ಬೀದರ್

ಬೀದರ್ ಜಿಲ್ಲೆ ಔರಾದ್ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಗುಂಡಪ್ಪ ವಕೀಲ್ ಅವರನ್ನು ಸುಮಾರು ಏಳು ದಿನಗಳ ಕಾಲ ಡಿಜಿಟಲ್ ಅರೆಸ್ಟ್‌ನಲ್ಲಿಟ್ಟು, ಬ್ಯಾಂಕ್ ಖಾತೆಯಿಂದ 30.99 ಲಕ್ಷ ರೂಪಾಯಿ ಲಪಟಾಯಿಸಿರುವ ಬಗ್ಗೆ ವರದಿಯಾಗಿದೆ.

ಈ ಸಂಬಂಧ ಗುಂಡಪ್ಪ ಅವರು ಮಂಗಳವಾರ (ಸೆ.9) ಬೆಂಗಳೂರಿನ ಸೈಬರ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಆಗಸ್ಟ್ 12ರಂದು ತಮ್ಮ ಬ್ಯಾಂಕ್ ಖಾತೆಯಿಂದ 30.99 ಲಕ್ಷ ರೂಪಾಯಿ ಅಕ್ರಮವಾಗಿ ದೋಚಲಾಗಿದೆ. ಇದರಲ್ಲಿ ಮುಂಬೈ ಮೂಲದ ಸಂದೀಪ್ ಕುಮಾರ್ ಹಾಗೂ ನೀರಜ್ ಕುಮಾರ್ ಅವರ ಕೈವಾಡವಿದ್ದು, ಅವರ ವಿರುದ್ಧ ತನಿಖೆ ನಡೆಸುವಂತೆ ಮನವಿ ಮಾಡಿದ್ದಾರೆ.

ಪ್ರಕರಣ ದಾಖಲಿಸಿ ಕೊಂಡಿರುವ ಪೊಲೀಸರು, ವಿಶೇಷ ತಂಡ ರಚಿಸಿ ತನಿಖೆ ಕೈಗೊಂಡಿದ್ದಾರೆ.

ಹಣ ಅಕ್ರಮ ವರ್ಗಾವಣೆ ಪ್ರಕರಣದ ಕಥೆ ಕಟ್ಟಿ ಗುಂಡಪ್ಪ ಅವರನ್ನು ಹೆದರಿಸಿದ ಸೈಬರ್ ವಂಚಕರು, ನಕಲಿ ಅಧಿಕಾರಿಗಳು, ನಕಲಿ ನ್ಯಾಯಾಧೀಶ, ನಕಲಿ ನ್ಯಾಯಾಲಯ ಹಾಗೂ ನಕಲಿ ಪೊಲೀಸ್ ಠಾಣೆಗಳ ಮೂಲಕ ವಂಚನೆ ನಡೆಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka